# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 173
Volume - 01 Issue - 173
ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269
Title- Code: KARKAN 28269
ಚಿತ್ರದುರ್ಗ
Chitradurga
ದಿನಾಂಕ: 23–01–2024 ಮಂಗಳವಾರ
Date: 23-01-2024 Tuesday
ಪುಟ: 4
Page: 4
ಬೆಲೆ : ರೂ.2–00
Price: Rs. 2-00



ಒಳಪುಟದ ಸುದ್ದಿಗಳು

ವಿಧಾನಸಭಾ ಕ್ಷೇತ್ರವಾರು ಮತದಾರರ ಅಂತಿಮ ಪಟ್ಟಿ ಪ್ರಕಟ 2

ಮಾದಕ ದ್ರವ್ಯ ಸೇವನೆ ತಳಮಟ್ಟದಿಂದ ತೊಡೆದು ಹಾಕಬೇಕು: ಜಿಲ್ಲಾ ನ್ಯಾ.ರಾಜೇಶ್ವರಿ 3

ಶ್ರೀ ಅಹೋಬಲ ಟಿವಿಎಸ್ 2 ವರ್ಷದ ಸಂಭ್ರಮ 4



ಸುದ್ದಿ, ಜಾಹಿರಾತಿಗೆ 9686622252


## ಕೋಟ್ಯಾಂತರ ಭಕ್ತಸಾಗರದಲ್ಲಿ ಮನದಲ್ಲಿ ಜೈ ಶ್ರೀರಾಮ್

# ರಾಮಮಂದಿರದ ಗರ್ಭಗುಡಿಯಲ್ಲಿ ವಿರಾಜಮಾನನಾದ ಬಾಲರಾಮ

» **ನಮ್ಮ ಜನ ಸಮಾಚಾರ**

ಅಯೋಧ್ಯೆ: ಭಾರತಕ್ಕೆ ಭಾರತವೇ ನಿರೀಕ್ಷಿಸುತ್ತಿದ್ದ ಅಯೋಧ್ಯೆ ರಾಮ ಮಂದಿರ ಲೋಕಾರ್ಪಣೆ ಮತ್ತು ಬಾಲರಾಮನ ಪ್ರಾಣ ಪ್ರತಿಷ್ಠೆ ಕಾರ್ಯಕ್ರಮ ಸೋಮವಾರ ಅಭಿಜಿತ್ ಮುಹೂರ್ತದಲ್ಲಿ ಸಂಪನ್ನಗೊಂಡಿತು. ಮೈಸೂರಿನ ಅರುಣ್ ಯೋಗಿರಾಜ್ ಕೆತ್ತನೆಯಲ್ಲಿ ಮೂಡಿದ ಬಾಲರಾಮನ ಪ್ರಾಣ ಪ್ರತಿಷ್ಠಾ ಮಹೋತ್ಸವ ಸೋಮವಾರ (ಜ.22) ಮಧ್ಯಾಹ್ನ 12.29:03 ರಿಂದ 12.30.35ರ ನಡುವಿನ 84 ಸೆಕೆಂಡ್‌ಗಳ ಅವಧಿಯಲ್ಲಿ ನೆರವೇರಿತು.

ಪ್ರಧಾನ ಮಂತ್ರಿ ನರೇಂದ್ರ ಮೋದಿ ನೇತೃತ್ವದಲ್ಲಿ ಪ್ರಾಣ ಪ್ರತಿಷ್ಠೆ ಕಾರ್ಯಕ್ರಮ ನಡೆಯಿತು. ಬೀಜಾಕ್ಷರಗಳ ಘೋಷಣೆಯೊಂದಿಗೆ ಮೊಳಗಿತು ಶಂಖನಾದ. ಅಯೋಧ್ಯೆಯಲ್ಲಿ ಬಾಲರಾಮನ ಸುಂದರ ವಿಗ್ರಹದ ಪ್ರಾಣ ಪ್ರತಿಷ್ಠಾಪನೆ ವಿಧಿವಿಧಾನದ ಅಂತಿಮ ಘಟ್ಟದಲ್ಲಿ ಕೈಲಿ ಹೂ ಹಿಡಿದಿರುವ ಪ್ರಧಾನಿ ನರೇಂದ್ರ ಮೋದಿ ಭಕ್ತಿಯಿಂದ ರಾಮನ ಪಾದಕ್ಕೆ ನಮಸ್ಕರಿಸಿದರು. ಪ್ರಾಣ ಪ್ರತಿಷ್ಠಾಪನೆಗಳ ವಿಧಿಗಳನ್ನು ಅತ್ಯಂತ ಭಕ್ತಿಯಿಂದ ನೆರವೇರಿಸಿದರು.

ಬೆಳ್ಳಿಯ ಛತ್ರಿ ಇರಿಸಲಾದ ಕೆಂಪು ಮಡಿಸಿದ ದುಪಟ್ಟಾ ಹಿಡಿದು ಪ್ರಧಾನ ಮಂತ್ರಿಗಳು ದೇವಾಲಯದ ಆವರಣದೊಳಗೆ ನಡೆದರು. ಚಿನ್ನದ ಬಣ್ಣದ ಕುರ್ತಾವನ್ನು ಧರಿಸಿ ಕೆನೆ ಬಣ್ಣದ ಧೋತಿ ಮತ್ತು ಪಾಟ್ಕಾವನ್ನು ಧರಿಸಿ ಬಂದಿದ್ದ ಅವರು, "ಪ್ರಾಣ ಪ್ರತಿಷ್ಠಾ ಸಮಾರಂಭದ ಸಂಕಲ್ಪ" ಕೈಗೊಂಡು ಮುಂದಿನ ವಿಧಿ ವಿಧಾನಗಳನ್ನು ನೆರವೇರಿಸಲು ಗರ್ಭಗುಡಿಯೊಳಗೆ ಹೋದರು.

ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್, ಉತ್ತರ ಪ್ರದೇಶ ರಾಜ್ಯಪಾಲರಾದ ಆನಂದಿಬೆನ್ ಪಟೇಲ್ ಮತ್ತು ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ಪೇಜಾವರ ಶ್ರೀ ವಿಶ್ವಪ್ರಸನ್ನ ತೀರ್ಥ ಸ್ವಾಮೀಜಿ ಅವರು ಧಾರ್ಮಿಕ ವಿಧಿವಿಧಾನದ ವೇಳೆ ಗರ್ಭಗುಡಿಯೊಳಗೆ ಹಾಜರಿದ್ದರು.


ಪ್ರಾಣ ಪ್ರತಿಷ್ಠಾ ಮಹೋತ್ಸವದ ಮುಹೂರ್ತ ಕಾಲದಲ್ಲೇ ಅಯೋಧ್ಯೆ ರಾಮ ಮಂದಿರದಮೇಲೆಭಾರತೀಯವಾಯುಪಡೆ ಹೆಲಿಕಾಪ್ಟರ್ ಹೂಮಳೆಗೆರೆಯಿತು.

"ಅಯೋಧ್ಯಾಧಾಮದಲ್ಲಿಶ್ರೀರಾಮಲಲಾ ಪ್ರಾಣ ಪ್ರತಿಷ್ಠಾ ಕಾರ್ಯ ನೆರವೇರಿಸುವ ಈ ಸನ್ನಿವೇಶ ಎಲ್ಲರನ್ನೂ ಭಾವುಕರನ್ನಾಗಿಸುವ ಅಸಾಧಾರಣ ಕ್ಷಣವಾಗಿದೆ. ಈ ದಿವ್ಯ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವ ಅವಕಾಶ ಸಿಕ್ಕಿದ್ದು ಸಂತೋಷ. ಶ್ರೀರಾಮನಿಗೆ ನಮನ ಎಂದು ಪ್ರಧಾನಿ ನರೇಂದ್ರ ಮೋದಿ ಎಕ್ಸ್‌ನಲ್ಲಿ ತಮ್ಮ ಸಂತೋಷ ಹಂಚಿಕೊಂಡಿದ್ದಾರೆ.

ಸಾಂಪ್ರದಾಯಿಕ ನಾಗರ ಶೈಲಿಯಲ್ಲಿ ನಿರ್ಮಿಸಲಾದ ಭವ್ಯ ರಾಮ ಮಂದಿರವು 380 ಅಡಿ ಉದ್ದ, 250 ಅಡಿ ಅಗಲ ಮತ್ತು 161 ಅಡಿ ಎತ್ತರವಿದೆ. 392 ಕಂಬಗಳು ಮತ್ತು ತೇಗದ ಮರದಿಂದ ನಿರ್ಮಿಸಲಾದ 44 ದ್ವಾರಗಳನ್ನು ಹೊಂದಿರುವ ಮೂರು ಅಂತಸ್ತಿನ ರಾಮ ಮಂದಿರಕ್ಕೆ ನಾಳೆಯಿಂದ ಸಾರ್ವಜನಿಕರು ಹೋಗಬಹುದು. ಬಾಲರಾಮನ ದರ್ಶನ ಪಡೆಯಬಹುದು.

ಅಭೂತ ಪೂರ್ವ ರಾಮ ಮಂದಿರ ಉದ್ಘಾಟನೆ ಮತ್ತು ಬಾಲರಾಮನ ಪ್ರಾಣ ಪ್ರತಿಷ್ಠಾ ಮಹೋತ್ಸವದ ನೇರಪ್ರಸಾರವನ್ನು ದೇಶ ವಿದೇಶಗಳಲ್ಲಿ ಭಾರತೀಯರು ಕಣ್ತುಂಬಿಕೊಂಡರು. ದೂರದರ್ಶನ ಮತ್ತು ಇತರೆ ಆನ್‌ಲೈನ್ ಪ್ಲಾಟ್‌ಫಾರ್ಮ್‌ಗಳ ಮೂಲಕ ಕಾರ್ಯಕ್ರಮ ನೇರ ಪ್ರಸಾರವಾಗಿತ್ತು.ಬಿಜೆಪಿ ಆಡಳಿತವಿರುವ ರಾಜ್ಯಗಳು ಮತ್ತು ಒಡಿಶಾದಲ್ಲಿ ರಜೆ ಘೋಷಿಸಲಾಯಿತು. ಕೇಂದ್ರ ಸರ್ಕಾರ ಕೂಡ ಉದ್ಘಾಟನೆಯ ನಿಮಿತ್ತ ಮಧ್ಯಾಹ್ನ 2.30ರ ತನಕ ರಜೆ ಘೋಷಿಸಿದೆ.









## ಕೊನೆಗೂ ನಮ್ಮ ರಾಮ ಬಂದಿದ್ದಾನೆ: ಪ್ರಧಾನಿ ನರೇಂದ್ರ ಮೋದಿ

» **ನಮ್ಮ ಜನ ಸಮಾಚಾರ**

ಅಯೋಧ್ಯೆ: ಪ್ರಭು ಶ್ರೀರಾಮ ಇನ್ನು ಮುಂದೆ ಟೆಂಟ್ ನಲ್ಲಿರುವುದಿಲ್ಲ.. ಆಯೋಧ್ಯೆ ಭವ್ಯ ಮಂದಿರದಲ್ಲಿ ಆತ ವಿರಾಜಮಾನರಾಗಿದ್ದಾರೆ.. ಶ್ರೀರಾಮನ ಕ್ಷಮೆ ಕೇಳುತ್ತೇನೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ಅಯೋಧ್ಯೆಯಲ್ಲಿ ಶ್ರೀರಾಮ ಮಂದಿರದ ಶಂಕುಸ್ಥಾಪನೆ ಸಮಾರಂಭದಲ್ಲಿ ಪಾಲ್ಗೊಂಡು ರಾಮಲಲ್ಲಾ ವಿಗ್ರಹದ ಪ್ರಾಣ ಪ್ರತಿಷ್ಠಾಪನೆ ಬಳಿಕ ಕಾರ್ಯಕ್ರಮಕ್ಕೆ ಆಗಮಿಸಿದ್ದ ಗಣ್ಯರನ್ನು ಉದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, 'ಕೊನೆಗೂ ನಮ್ಮ ರಾಮ ಬಂದಿದ್ದಾನೆ. ಪ್ರತಿಯೊಬ್ಬ ಭಾರತೀಯನ ಅಂತರಂಗದಲ್ಲಿ ವಿರಾಜಮಾನನಾಗಿದ್ದಾನೆ. ಇನ್ನು ಮುಂದೆ ಆತ ಟೆಂಟ್ ನಲ್ಲಿರುವುದಿಲ್ಲ. ರಾಮ ಪ್ರತಿಯೊಬ್ಬ ಭಾರತೀಯನ ಅಂತರಂಗದಲ್ಲಿ ನೆಲೆಸಿದ್ದಾನೆ. ಈ ಶುಭ ಸಂದರ್ಭದಲ್ಲಿ ನಾನು ಎಲ್ಲರಿಗೂ ಅಭಿನಂದನೆ ಸಲ್ಲಿಸುತ್ತೇನೆ. ಹೇಳಲು ತುಂಬಾ ವಿಷಯಗಳಿವೆ. ಆದ್ರೆ ಸಂತಸದಿಂದ ನನಗೆ ಮಾತೇ ಬರುತ್ತಿಲ್ಲ. ಇನ್ಮುಂದೆ ನಮ್ಮ ರಾಮ ಟೆಂಟ್‌ನಲ್ಲಿ ವಾಸಿಸುವುದಿಲ್ಲ, ಅದ್ದೂರಿ ದೇವಾಲಯದಲ್ಲಿ ವಿರಾಜಮಾನನಾಗಿರುತ್ತಾನೆ. ಈ ಸಮರ್ಪಣೆಯ ಕ್ಷಣವು ಭಗವಾನ್ ರಾಮನ ಆಶೀರ್ವಾದ ಎಂದು ಹೊಗಳಿದರು.

ದೇವಸ್ಥಾನದ ಗರ್ಭಗುಡಿಯಲ್ಲಿ ದೈವಿಕ ಪ್ರಜ್ಞೆಯನ್ನು ನೋಡುವ ನಿಮ್ಮ ಮುಂದೆ ನಾನು ಬಂದಿದ್ದೇನೆ. ಹೇಳಲು ತುಂಬಾ ಇದೆ ಆದರೆ, ಆದರೆ ನನ್ನ ಗಂಟಲಿನಲ್ಲಿ ಒಂದು ಗೆಡ್ಡೆ ಇದೆ. ಅಭೂತಪೂರ್ವ ತಾಳ್ಮೆ, ಅಸಂಖ್ಯಾತ ತ್ಯಾಗ ಮತ್ತು ತಪಸ್ಸಿನ ನಂತರ ನಮ್ಮ ಶ್ರೀರಾಮನು ಆಗಮಿಸಿದ್ದಾನೆ. ಈ ಸಂದರ್ಭದಲ್ಲಿ ದೇಶದ ಪ್ರಜೆಗಳನ್ನು ನಾನು ಅಭಿನಂದಿಸುತ್ತೇನೆ. ರಾಮ ಲಲ್ಲಾ, ಇನ್ನು ಮುಂದೆ ಟೆಂಟ್‌ನಲ್ಲಿ ವಾಸಿಸುವುದಿಲ್ಲ. ಈ ಸಮರ್ಪಣೆಯ ಕ್ಷಣವು ಭಗವಾನ್ ರಾಮನ ಆಶೀರ್ವಾದವಾಗಿದೆ ಎಂದರು.

**ಹೊಸ ಯುಗದ ಉದಯ:** ಅಂತೆಯೇ ಜನವರಿ 22 "ಕ್ಯಾಲೆಂಡರ್‌ನಲ್ಲಿ ದಿನಾಂಕವಲ್ಲ, ಆದರೆ ಹೊಸ ಯುಗದ ಉದಯ. ಸಾವಿರಾರು ವರ್ಷಗಳ ನಂತರವೂ ಜನರು ಈ ದಿನಾಂಕ, ಕ್ಷಣವನ್ನು ನೆನಪಿಸಿಕೊಳ್ಳುತ್ತಾರೆ.

ಪುಟ 2















## ಫಾಸ್ಟ್ ನ್ಯೂಸ್

### ಕೊನೆಗೂ ನಮ್ಮ ರಾಮ ಬಂದಿದ್ದಾನೆ: ಪ್ರಧಾನಿ ನರೇಂದ್ರ ಮೋದಿ



» ಮೊದಲ ಪುಟದಿಂದ

ನಾವು ಇದನ್ನು ವೀಕ್ಷಿಸುತ್ತಿರುವುದು ರಾಮನ ಪರಮ ಆಶೀರ್ವಾದವಾಗಿದೆ.ಇವುಶಾಶ್ವತವಾದನೆನಪುಗಳು, ನಮ್ಮ ಭವಿಷ್ಯವು ನಮ್ಮ ಭೂತಕಾಲಕ್ಕಿಂತ ಹೆಚ್ಚು ಮುಖ್ಯವಾಗಿದೆ. ಗುಲಾಮಗಿರಿಯ ಮನಸ್ಥಿತಿಯನ್ನು ತೊಡೆದುಹಾಕುವ ಮೂಲಕ ಮಹಾಮಸ್ತಕಾಭಿಷೇಕ ಸಮಾರಂಭ ನೆರವೇರಿದೆ. ನಾನು ಆಧ್ಯಾತ್ಮಿಕ ಅನುಭವದಿಂದ ನಡುಗುತ್ತಿದ್ದೇನೆ. ನವ ಭಾರತವು ಉದಯಿಸುತ್ತಿದೆ ಮತ್ತು ಹೊಸ ಇತಿಹಾಸವನ್ನು ಬರೆಯುತ್ತಿದೆ. ಶತಮಾನಗಳ ಕಾಯುವಿಕೆ, ತಾಳ್ಮೆ, ತ್ಯಾಗದ ನಂತರ ಇಂದು ನಮ್ಮ ರಾಮ ಆಗಮಿಸಿದ್ದಾನೆ. ಮಂದಿರ ನಿರ್ಮಾಣ ವಿಳಂಬಕ್ಕೆ ನಾನು ಶ್ರೀರಾಮನಲ್ಲಿ ಕ್ಷಮೆಯಾಚಿಸುತ್ತೇನೆ. ನಾನು ಕಾರ್ಯಕರ್ತರ ತ್ಯಾಗವನ್ನು ಗೌರವಿಸುತ್ತೇನೆ. ರಾಮನು ಇನ್ನು ಮುಂದೆ ಸಮಸ್ಯೆಯಲ್ಲ, ರಾಮನೇ ಪರಿಹಾರ. ರಾಮ್ ಲಲ್ಲಾ ಈಗ ಟೆಂಟ್‌ನಲ್ಲಿ ಉಳಿಯುವುದಿಲ್ಲ, ಅವರು ಭವ್ಯವಾದ ದೇವಾಲಯದಲ್ಲಿ ಉಳಿಯುತ್ತಾರೆ. ಭಾರತದಾದ್ಯಂತ ರಾಮನಾಮ ಆಚರಣೆಗಳು ನಡೆಯುತ್ತಿವೆ. ನಾವು ಬೆಂಕಿಯನ್ನು ಹೊತ್ತಿಸುತ್ತಿಲ್ಲ, ನಾವು ಭಾರತವನ್ನು ಪುನಃ ಶಕ್ತಿಯುತಗೊಳಿಸುತ್ತಿದ್ದೇವೆ ಎಂದರು.

"ಈ ಐತಿಹಾಸಿಕ ಘಟನೆಗೆ ಸಾಕ್ಷಿಯಾಗಲು ನಾವು ಜೀವಂತವಾಗಿರುವುದೇ ಒಂದು ಸೌಭಾಗ್ಯ. ಈ ಹಂತವನ್ನು ತಲುಪಲು ತುಂಬಾ ಸಮಯ ತೆಗೆದುಕೊಂಡಿದ್ದಕ್ಕಾಗಿ ನಾನು ಶ್ರೀರಾಮನ ಕ್ಷಮೆ ಕೇಳುತ್ತೇನೆ. ಏನಾದರೂ ಲೋಪ ಸಂಭವಿಸಿರಬೇಕು. ಹೀಗಾಗಿ ವಿಳಂಬವಾಯಿತೇನೋ... ಕೆಲವು ರಾಮನ ಅಸ್ತಿತ್ವವನ್ನು ಪ್ರಶ್ನಿಸುತ್ತಿದ್ದಾರೆ. ಭಾರತದ ಸಂವಿಧಾನದಲ್ಲಿ, ಅದರ ಮೊದಲ ಪುಟದಲ್ಲಿ, ಶ್ರೀರಾಮನಿದ್ದಾನೆ. ಕಾನೂನಿನ ಘನತೆಯನ್ನು ಕಾಪಾಡಿದ್ದಕ್ಕಾಗಿ ನಾನು ಸುಪ್ರೀಂ ಕೋರ್ಟ್‌ಗೆ ಧನ್ಯವಾದ ಹೇಳುತ್ತೇನೆ" ಎಂದು ಮೋದಿ ಹೇಳಿದರು

### ಅಂಭಾ ಭವಾನಿ ದೇವಸ್ಥಾನದಲ್ಲಿ ರಾಮಚಂದ್ರನಿಗೆ ಪೂಜೆ



» ನಮ್ಮ ಜನ ಸಮಾಚಾರ

ಚಿತ್ರದುರ್ಗ : ಅಂಭಾ ಭವಾನಿ ದೇವಸ್ಥಾನದಲ್ಲಿ ಶ್ರೀರಾಮಚಂದ್ರನಿಗೆ ವಿಶೇಷ ಪೂಜೆ ಸಲ್ಲಿಸಿ ಭಕ್ತರಿಗೆ ಪ್ರಸಾದ ವಿನಿಯೋಗಿಸಲಾಯಿತು. ಉತ್ತರ ಪ್ರದೇಶದ ಅಯೋಧ್ಯೆಯಲ್ಲಿ ಪ್ರಧಾನಿ ನರೇಂದ್ರಮೋದಿರವರು ಶ್ರೀರಾಮನ ಪ್ರಾಣ ಪ್ರತಿಷ್ಠಾಪನೆ ನೆರವೇರಿಸುತ್ತಿದ್ದಂತೆ ದೇವಸ್ಥಾನದ ಆವರಣದಲ್ಲಿ ಪಟಾಕಿ ಸಿಡಿಸಿ ಜೈಶ್ರೀರಾಮ್, ಜೈ ಜೈ ಶ್ರೀರಾಮ್ ಎನ್ನುವ ಘೋಷಣೆಗಳು ಮೊಳಗಿದವು. ಉಷಾಭಾಯಿ ಜಾದವ್, ಕೆ.ಕೆ.ಎಂ.ಪಿ.ಜಿಲ್ಲಾಧ್ಯಕ್ಷ ಸುರೇ□□ರಾವ್ ಜಾದವ್, ಜಿಲ್ಲಾ ಕಾರ್ಯದರ್ಶಿ ಮಂಜುನಾಥ್ ಗಾಯ□□ವಾಡ್, ಹರೀಶ್ ಜಾದವ್, ವಿದ್ಯಾಲಾಡ್, ಕಲಾಭಾಯಿ ಘಾಟ್ಗೆ, ಕೃಷ್ಣೋಜಿರಾವ್ ಮೋರೆ ಇನ್ನು ಅನೇಕರು ವಿಶೇಷ ಪೂಜೆಯಲ್ಲಿ ಪಾಲ್ಗೊಂಡು ಶ್ರೀರಾಮನಿಗೆ ಭಕ್ತಿ ಸಮರ್ಪಿಸಿದರು.

### ಜ.28ರಂದು ಪೋಲೀಸ್ ಕಾನ್ಸ್‌ಟೇಬಲ್ ಹುದ್ದೆಗೆ ಲಿಖಿತ ಪರೀಕ್ಷೆ

» ಚಿತ್ರದುರ್ಗ

2022-23ನೇ ಸಾಲಿನ ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ (ಸಿಎಆರ್ ಮತ್ತು ಡಿಎಆರ್)-3064 ಹುದ್ದೆಗಳನ್ನು ಭರ್ತಿ ಮಾಡುವ ಸಲುವಾಗಿ ನೇಮಕಾತಿ ಪ್ರಕ್ರಿಯೆ ಕೈಗೊಳ್ಳಲಾಗಿದ್ದು, ಅರ್ಜಿ ಸಲ್ಲಿಸಿರುವಅರ್ಹಅಭ್ಯರ್ಥಿಗಳಿಗೆನಿಯಮಾನುಸಾರ ಇದೇ ಜನವರಿ 28ರಂದು ಭಾನುವಾರ ಬೆಳಿಗ್ಗೆ 11 ರಿಂದ ಮಧ್ಯಾಹ್ನ 12.30 ರವರೆಗೆ ಚಿತ್ರದುರ್ಗ ನಗರದಲ್ಲಿ ಒಟ್ಟು 25 ಶಾಲಾ, ಕಾಲೇಜುಗಳಲ್ಲಿ ಲಿಖಿತ ಪರೀಕ್ಷೆ ನಡೆಯಲಿದೆ. ಲಿಖಿತ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು ಯಾವುದೇ ರೀತಿಯ ಪುಸ್ತಕ, ಕೈಬರಹ ಚೀಟಿ, ಪೇಜರ್, ಕ್ಯಾಲ್ಕುಲೇಟರ್, ಇಯರ್‌ಫೋನ್, ಮೊಬೈಲ್‌ಫೋನ್ ಪರೀಕ್ಷೆಗೆ ತರಲು ನಿಷೇಧಿಸಲಾಗಿದೆ. ಅಭ್ಯರ್ಥಿಗಳು ಬೆಲೆ ಬಾಳುವ ವಸ್ತು, ಸಾಮಾಗ್ರಿ ತರದಂತೆ ತಿಳಿಸಲಾಗಿದ್ದು, ತಮ್ಮ ವಸ್ತುಗಳಿಗೆ ತಾವೇ ಜವಾಬ್ದಾರರು. ಅಭ್ಯರ್ಥಿಗಳಿಗೆ ಕರೆಪತ್ರದ ಬಗ್ಗೆ ಮುಂಬರುವ ದಿನಗಳಲ್ಲಿ ಎಸ್‌ಎಂಎಸ್ ಮೂಲಕ ಮಾಹಿತಿ ನೀಡಲಾಗುವುದು ಹಾಗೂ ಕರೆಪತ್ರದ ಲಿಂಕ್ ಸಹ ಕಳಿಸಲಾಗುವುದು. ಅಭ್ಯರ್ಥಿಗಳು ಕರೆಪತ್ರ ಡೌನ್‌ಲೋಡ್ ಮಾಡಿಕೊಂಡು ನಿಗಧಿಪಡಿಸಿದ ದಿನಾಂಕದಂದು ಲಿಖಿತ ಪರೀಕ್ಷೆಗೆ ಹಾಜರಾಗಲು ಸೂಚಿಸಿದೆ.

### ವಿಧಾನಸಭಾ ಕ್ಷೇತ್ರವಾರು ಮತದಾರರ ಅಂತಿಮ ಪಟ್ಟಿ ಪ್ರಕಟ

# ಜಿಲ್ಲೆಯಲ್ಲಿ 14,18,211 ಮತದಾರರು

» ಚಿತ್ರದುರ್ಗ

ಭಾರತ ಚುನಾವಣಾ ಆಯೋಗದ ಸೂಚನೆಯಂತೆ ಜಿಲ್ಲೆಯ ವಿಧಾನಸಭಾ ಕ್ಷೇತ್ರವಾರು ಮತದಾರರ ಅಂತಿಮ ಪಟ್ಟಿಯನ್ನು ಸೋಮವಾರ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಮ್ಮುಖದಲ್ಲಿ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಪ್ರಕಟಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿಧಾನಸಭಾ ಕ್ಷೇತ್ರವಾರು ಮತದಾರರ ಅಂತಿಮ ಪಟ್ಟಿ ಪ್ರಕಟ ಸಂಬಂಧ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ನಡೆಸಿದ ಸಭೆಯಲ್ಲಿ ಮತದಾರರ ಅಂತಿಮ ಪಟ್ಟಿ ಪ್ರಕಟಿಸಿ ಮಾತನಾಡಿದ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ, ಚುನಾವಣಾ ಆಯೋಗದ ನಿರ್ದೇಶನದಂತೆ ವಿಧಾನಸಭಾ ಕ್ಷೇತ್ರವಾರು ಮತದಾರರ ಪಟ್ಟಿಗಳ ಅಂತಿಮ ಪ್ರಕಟಣೆಯನ್ನು ಸೋಮವಾರ ಪ್ರಕಟಿಸಲಾಗಿದೆ ಎಂದು ತಿಳಿಸಿದರು.

2023ರ ಅಕ್ಟೋಬರ್27 ರಂದು ವಿಧಾನಸಭಾ ಕ್ಷೇತ್ರವಾರು ಕರಡು ಮತದಾರರ ಪಟ್ಟಿ ಪ್ರಚುರಪಡಿಸಲಾಗಿತ್ತು. ನವೆಂಬರ್ ಹಾಗೂ ಡಿಸೆಂಬರ್ ಮಾಹೆಯಲ್ಲಿ ವಿಶೇಷ ಪರಿಷ್ಕರಣೆಕಾರ್ಯ ನಡೆದಿದ್ದು, ಇದೀಗ ಮತದಾರರ ಅಂತಿಮ ಪಟ್ಟಿ ಪ್ರಕಟಿಸಲಾಗಿದೆ. ಮತದಾರರ ಅಂತಿಮ ಪಟ್ಟಿ ಪ್ರಕಟವಾದ ನಂತರವೂ ಸಹ ನಿರಂತರವಾಗಿ ಮತದಾರರ ಪಟ್ಟಿಗೆ ಅರ್ಹರ ಸೇರ್ಪಡೆ ಹಾಗೂ ತಿದ್ದುಪಡಿಗೆ ಅವಕಾಶ ಕಲ್ಪಿಸಲಾಗಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ 1418211 ಮತದಾರರು: ಜಿಲ್ಲೆಯಲ್ಲಿ ಒಟ್ಟು 1661 ಮತಗಟ್ಟೆಗಳಿದ್ದು, ಕರಡು ಮತದಾರರ ಪಟ್ಟಿಯಲ್ಲಿ 1401830 ಮತದಾರರು ಇದ್ದರು. ಮತದಾರರ ಅಂತಿಮ ಪಟ್ಟಿ ಪ್ರಕಟ ಅನ್ವಯ 704896 ಪುರುಷ ಮತದಾರರು, 713228 ಮಹಿಳಾ ಮತದಾರರು ಹಾಗೂ 87 ಇತರೆ ಮತದಾರರು ಸೇರಿದಂತೆ ಜಿಲ್ಲೆಯಲ್ಲಿ ಒಟ್ಟು 1418211 ಮತದಾರರು ಇದ್ದಾರೆ ಎಂದು



ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ತಿಳಿಸಿದರು. ಮೊಳಕಾಲ್ಮುರು ವಿಧಾನಸಭಾ ಕ್ಷೇತ್ರದಲ್ಲಿ 125058 ಪುರುಷರು, 124181 ಮಹಿಳೆಯರು ಹಾಗೂ 13 ಇತರೆ ಸೇರಿದಂತೆ ಒಟ್ಟು 249252 ಮತದಾರರರಿದ್ದಾರೆ. ಚಳ್ಳಕೆರೆ ವಿಧಾನಸಭಾ ಕ್ಷೇತ್ರದಲ್ಲಿ 110448 ಪುರುಷರು, 112106 ಮಹಿಳೆಯರು ಹಾಗೂ 6 ಇತರೆ ಸೇರಿದಂತೆ ಒಟ್ಟು 222560 ಮತದಾರರಿದ್ದಾರೆ. ಚಿತ್ರದುರ್ಗ ವಿಧಾನಸಭಾ ಕ್ಷೇತ್ರದಲ್ಲಿ 129809 ಪುರುಷರು, 134398 ಮಹಿಳೆಯರು ಹಾಗೂ 41 ಇತರೆ ಸೇರಿ ಒಟ್ಟು 264248 ಮತದಾರರಿದ್ದಾರೆ. ಹಿರಿಯೂರು ವಿಧಾನಸಭಾ ಕ್ಷೇತ್ರದಲ್ಲಿ 121502 ಪುರುಷರು, 124210 ಮಹಿಳೆಯರು ಹಾಗೂ 16 ಇತರೆ ಮತದಾರರು ಸೇರಿದಂತೆ ಒಟ್ಟು 245728 ಮತದಾರರು ಇದ್ದಾರೆ. ಹೊಸದುರ್ಗ ವಿಧಾನಸಭಾ ಕ್ಷೇತ್ರದಲ್ಲಿ 99860 ಪುರುಷರು, 99596 ಹಾಗೂ 1 ಇತರೆ ಮತದಾರರು ಸೇರಿದಂತೆ ಒಟ್ಟು 199457 ಮತದಾರರು ಇದ್ದಾರೆ. ಹೊಳಲ್ಕೆರೆ ವಿಧಾನಸಭಾ ಕ್ಷೇತ್ರದಲ್ಲಿ 118219 ಪುರುಷರು, 118737 ಮಹಿಳೆಯರು ಹಾಗೂ 10 ಇತರೆ ಸೇರಿದಂತೆ ಒಟ್ಟು 236966 ಮತದಾರರು ಇದ್ದಾರೆ. ಜಿಲ್ಲೆಯ ಆರು ವಿಧಾನಸಭಾ ಕ್ಷೇತ್ರಗಳು ಸೇರಿದಂತೆ ಜಿಲ್ಲೆಯಲ್ಲಿ ಒಟ್ಟು 1418211 ಮತದಾರರು ಇದ್ದಾರೆ ಎಂದು ತಿಳಿಸಿದರು.

2023ರಅಕ್ಟೋಬರ್‌ಹಾಗೂನವೆಂಬರ್ ಮಾಹೆಯಲ್ಲಿ ನಡೆದ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಕಾರ್ಯಕ್ರಮದಲ್ಲಿ ಜಿಲ್ಲೆಯಲ್ಲಿ 11260 ಪುರುಷರು ಹಾಗೂ 14761 ಮಹಿಳೆಯರು ಹಾಗೂ 8 ಮಂದಿ ಇತರರು ಸೇರಿದಂತೆ ಒಟ್ಟು 26029 ಮತದಾರರು ಹೊಸದಾಗಿ ಮತದಾರರ ಪಟ್ಟಿಗೆ ಸೇರ್ಪಡೆಯಾಗಿದ್ದಾರೆ. ಮರಣ ಹೊಂದಿದ 9648 ಮತದಾರರನ್ನು ಗುರುತಿಸಿ ಅವರನ್ನು ಮತದಾರರ ಪಟ್ಟಿಯಿಂದ ಕೈಬಿಡಲಾಗಿದೆ ಎಂದರು.

35683 ಯುವ ಮತದಾರರು: ಮತದಾರರ ಅಂತಿಮ ಪಟ್ಟಿಯಲ್ಲಿ 18-19 ವರ್ಷ ವಯೋಮಿತಿಯ ಯುವ ಮತದಾರರು ಜಿಲ್ಲೆಯಲ್ಲಿ 35,683 ಮಂದಿ ಇದ್ದಾರೆ. ಕರಡು ಮತದಾರರ ಪಟ್ಟಿಯಲ್ಲಿ 23659 ಮತದಾರರು ಇದ್ದರು. ಕಳೆದ ಎರಡು-ಮೂರು ತಿಂಗಳಿಂದ ಬಿಎಲ್‌ಒಗಳು ಮನೆ ಮನೆ ಭೇಟಿ, ಕಾಲೇಜುಗಳಲ್ಲಿಯೂ ಸಹ ಯುವ ಮತದಾರರನ್ನು ಸೇರ್ಪಡೆ ಮಾಡಿದ್ದಾರೆ. ಚಿತ್ರದುರ್ಗ ಜಿಲ್ಲೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮತದಾರರ ನೊಂದಣಿ ಕಾರ್ಯ ಮಾಡಿರುವುದಕ್ಕೆ ಭಾರತ ಚುನಾವಣಾ ಆಯೋಗವು ಸಹ ಶ್ಲಾಘನೆ ಮಾಡಿದೆ ಜಿಲ್ಲಾಧಿಕಾರಿಗಳು ತಿಳಿಸಿದರು.

ರಾಜಕೀಯ ಪಕ್ಷದವರು ಪ್ರತಿಯೊಂದು ಮತಗಟ್ಟೆಗೆ ಏಜೆಂಟರನ್ನು ನೇಮಕ ಮಾಡಬೇಕು. ಏಜೆಂಟರು ತಮ್ಮ ವ್ಯಾಪ್ತಿಯ ಮತದಾರರ ಪಟ್ಟಿಗೆ ಅರ್ಹರನ್ನು ಸೇರಿಸುವ,ಬಿಡತಕ್ಕ, ತಿದ್ದುಪಡಿ ಮಾಡಲು ಬಿಎಲ್‌ಒಗಳಿಗೆ ಸಹಕಾರ ನೀಡಬೇಕು ಎಂದು ಕೋರಿದರು.

ಮತದಾರರ ಪಟ್ಟಿಯಲ್ಲಿ ಮತದಾರರ ಹೆಸರನ್ನು ನೊಂದಾಯಿಸಲು ಪ್ರತಿಯೊಬ್ಬರ ನಾಗರೀಕರ ಹಕ್ಕಾಗಿರುತ್ತದೆ. ಈ ಸದಾಶಕಾಶವನ್ನು ಪ್ರತಿಯೊಬ್ಬರು ತಪ್ಪದೇ ಉಪಯೋಗಿಸಿಕೊಳ್ಳಬೇಕು. ಮತದಾರರ ಪಟ್ಟಿಯ ಬಗ್ಗೆ ಯಾವುದೇ ಸಂದೇಹಗಳಿದ್ದಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯ ಜಿಲ್ಲಾ ಸಂಪರ್ಕ ಕೇಂದ್ರದ ಸಹಾಯವಾಣಿ ಸಂಖ್ಯೆ 08194-222176 ಅಥವಾ ಟೋಲ್ ಫ್ರೀ ಸಂಖ್ಯೆ 1950 ಗೆ ಕರೆ ಮಾಡಬಹುದು ಎಂದು ತಿಳಿಸಿದರು.

ಅಪರಜಿಲ್ಲಾಧಿಕಾರಿಬಿ.ಟಿ.ಕುಮಾರಸ್ವಾಮಿ ಮಾತನಾಡಿ, ಅರ್ಹ ಮತದಾರರು ಸಂಬಂಧಿಸಿದ ಮತದಾರರ ಪಟ್ಟಿಯಲ್ಲಿ ಹೆಸರು ಸೇರಿಲ್ಲದವರು ಹಾಗೂ ಹೆಸರು ಕೈಬಿಟ್ಟುಹೋಗಿರುವವರು ಹಾಗೂ ಮತದಾರರ ಪಟ್ಟಿಯಲ್ಲಿ ಮಾಹಿತಿಯನ್ನು ತಿದ್ದುಪಡಿ ಮಾಡಿಸಬೇಕಾದಲ್ಲಿ ಮತ್ತು ಅದೇ ವಿಧಾನಸಭಾ ಕ್ಷೇತ್ರದ ಬೇರೆ ಬೇರೆ ಮತಗಟ್ಟೆಗೆ ವರ್ಗಾಯಿಸಬೇಕಾಗಿದ್ದಲ್ಲಿ ನಿಗಧಿಪಡಿಸಿರುವ ನಮೂನೆಗಳಲ್ಲಿ ಅರ್ಜಿಗಳನ್ನುಭರ್ತಿ ಮಾಡಿ ತಮ್ಮ ವ್ಯಾಪ್ತಿಯ ಮತದಾನ ಕೇಂದ್ರದಲ್ಲಿ, ತಾಲ್ಲೂಕು ಕಚೇರಿಯಲ್ಲಿ, ಉಪವಿಭಾಗಾಧಿಕಾರಿಗಳ ಕಾರ್ಯಾಲಯದಲ್ಲಿ ನೀಡಿ ಸ್ವೀಕೃತಿ ಪಡೆಯಬಹುದಾಗಿದೆ. ಹಾಗೂ www.ceokarnataka.kar.nic.in & https://chitradurga.nic.in ವೆಬ್‌ಸೈಟ್‌ನಲ್ಲಿಯೂ ಸಹ ಪರಿಶೀಲಿಸಿಕೊಂಡು ಪಟ್ಟಿಯಲ್ಲಿ ಹೆಸರು ಇಲ್ಲದಿದ್ದಲ್ಲಿ ಪೂರಕ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿಗಳನ್ನು VHA App (Voter help Line) ನಲ್ಲಿಯೂ ಆನ್‌ಲೈನ್ ಮೂಲಕ ಸಲ್ಲಿಸಹುದಾಗಿದೆ ಎಂದರು.

ಭಾವಚಿತ್ರವಿರುವ ಮತದಾರರ ಗುರುತಿನ ಚೀಟಿಯನ್ನು ಮತದಾರರು ನೀಡಿರುವ ವಿಳಾಸಕ್ಕೆ ಅಂಚೆ ಮೂಲಕ ಇನ್ನೂ ವಾರದೊಳಗೆ ಕಳುಹಿಸಲಾಗುವುದು ಎಂದರು.

ಸಭೆಯಲ್ಲಿ ಪ್ರಭಾರ ಉಪವಿಭಾಗಾಧಿಕಾರಿ ವಿವೇಕ್, ಜೆಡಿಎಸ್ ಜಿಲ್ಲಾ ಮಹಾ ಪ್ರಧಾನ ಕಾರ್ಯದರ್ಶಿ ಗೋಪಾಲಸ್ವಾಮಿ ನಾಯಕ, ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಡಿ.ಎನ್.ಮೈಲಾರಪ್ಪ, ಕಾರ್ಯದರ್ಶಿ ಸಿ.ಜೆ.ನಾಸಿರುದ್ದೀನ್, ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ನರೇಂದ್ರ ಹೊನ್ನಾಳ್, ಸಿಪಿಐಎಂ ಡಿಒಸಿ ಸಿ.ಕೆ.ಗೌಸ್‌ಪೀರ್ ಸೇರಿದಂತೆ ಚುನಾವಣಾ ತಹಶೀಲ್ದಾರ್ ಎಂ.ಸಂತೋಷ್ ಕುಮಾರ್ ಹಾಗೂ ಚುನಾವಣೆ ಶಾಖೆಯ ಸಿಬ್ಬಂದಿ ವರ್ಗದವರು ಇದ್ದರು.

## ಪುಟ್ಟ ಕಂದನಿಗೆ ಶ್ರೀರಾಮ ಎಂದು ನಾಮಕರಣ

» ಚಿತ್ರದುರ್ಗ

ಅಯೋಧ್ಯೆಯಲ್ಲಿ ಶ್ರೀರಾಮಲಿಲ್ಲಾ ಪ್ರಾಣಪ್ರತಿಷ್ಠಾನೆ ದಿನದ ಇಂದು ವಿಶ್ವದೆಲ್ಲೇಡೆ ಶ್ರೀರಾಮ ಜಪ ಪಠಿಸುತ್ತಿದ್ದು, ಕೋಟೆನಾಡು ಚಿತ್ರದುರ್ಗದಲ್ಲಿ ಪುಟ್ಟ ಕಂದನಿಗೆ ಶ್ರೀರಾಮ ಎಂದು ನಾಮಕರಣ ಮಾಡಲಾಗಿದೆ.


ವಿಶ್ವದ ಬಹುಸಂಖ್ಯಾತ ಜನರ ಎಷ್ಟೋ ವರ್ಷಗಳ ಕನಸ್ಸಾಗಿರುವಂತಹ ಅಯೋಧ್ಯೆಯಲ್ಲಿ ಶ್ರೀರಾಮಲಲ್ಲಾ ಪ್ರಾಣಪ್ರತಿಷ್ಠಾನೆ ಇಂದು ನೆರವೇರುತ್ತಿದ್ದು, ಇಂದು ಇಡೀ ದೇಶಕ್ಕೆ ತುಂಬಾ ಶ್ರೇಷ್ಠವಾದ ದಿನವಾಗಿದೆ. ಈ ಸಂದರ್ಭದಲ್ಲಿ ಚಿತ್ರದುರ್ಗದ ಗಾಂಧಿನಗರ ಬಡಾವಣೆಯ ನಿವಾಸಿಗಳಾದ ಸಾಗರ್ ಹಾಗೂ ಭಾವನಾ ಅವರ ಪುತ್ರ ಪುಟ್ಟ ಕಂದನಿಗೆ ಶ್ರೀರಾಮ ಎಂದು ನಾಮಕರಣ ಮಾಡಲಾಗಿದೆ.

ಬಾಲ ರಾಮನ ಪ್ರಾಣಪ್ರತಿಷ್ಠಾಪನೆ ಸಮಯವಾದ 12.30 ರಿಂದ 32 ಸೆಕೆಂಡುಗಳ ಸಮಯದಲ್ಲೇ ಸಾಗರ್, ಭಾವನಾ ತಮ್ಮ ಪುತ್ರನಿಗೆ ಶ್ರೀರಾಮ ಎಂದು ನಾಮಕರಣ ಮಾಡಿದರು.

ಈ ವೇಳೆ ಮಾತನಾಡಿರುವ ಪುಟ್ಟ ಕಂದನ ತಾಯಿ ಭಾವನ, ಇಂದು ಇಡೀ ದೇಶಕ್ಕೆ ತುಂಬಾ ಶ್ರೇಷ್ಠವಾದ ದಿನವಾಗಿದೆ. ಈ ದಿನ ಬಿಟ್ಟರೆ ಮುಂದೆ ಇಂತಹ ದಿನ ಮತ್ತೆ ಸಿಗುವುದಿಲ್ಲ. ಹಾಗಾಗಿಯೇ ನನ್ನ ಮಗನಿಗೆ ಶ್ರೀರಾಮ ಎಂಬ ಹೆಸರನ್ನುನಾಮಕರಣ ಮಾಡಲಾಗಿದೆ. ಅಯೋಧ್ಯೆಯಲ್ಲಿ ಬಾಲ ರಾಮನ ಪ್ರಾಣಪ್ರತಿಷ್ಠಾಪನೆ ಮಾಡಲು ದಿನಾಂಕ ಘೋಷಣೆಯಾದ ದಿನವೇ ನಾವು ಸೇರಿದಂತೆ ಕುಟುಂಬಸ್ಥರೆಲ್ಲರೂ ಅದೇ ಸಮಯದಲ್ಲೇ ನಮ್ಮ ಕಂದನಿಗೆ ಶ್ರೀರಾಮ ಎಂದು ನಾಮಕರಣ ಮಾಡಲು ಉತ್ಸುಕರಾಗಿ ಸಜ್ಜಾಗಿದ್ದೆವು. ಇಡೀ ವಿಶ್ವವೇ ಅಯೋಧ್ಯೆಯತ್ತ ತಿರುಗಿ ನೋಡುತ್ತಿದೆ. ಇಂತಹ ಪುಣ್ಯ ದಿನ ನಮ್ಮ ಮಗುವಿಗೆ ಸಿಕ್ಕಿರುವುದು ನಮ್ಮ ಪುಣ್ಯ ಎಂದು ತಿಳಿಸಿದ್ದಾರೆ.



### ಕಡಬನಕಟ್ಟೆ ಆಂಜನೇಯಸ್ವಾಮಿಗೆ ಪೂಜೆ ಸಲ್ಲಿಸಿದ ಟಿ.ರಘುಮೂರ್ತಿ



ಚಿತ್ರದುರ್ಗ: ಶಾಸಕ ಟಿ.ರಘುಮೂರ್ತಿ ಅವರು ಚಿತ್ರದುರ್ಗ ತಾಲ್ಲೂಕಿನ ತುರುವನೂರು ಹೋಬಳಿಯ ಕಡಬನಕಟ್ಟೆ ಗ್ರಾಮದ ಶ್ರೀ ರಾಮ ಮಂದಿರ ಮತ್ತು ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನದಲ್ಲಿ ನಡೆದ ವಿಶೇಷ ಪೂಜಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಪೂಜೆ ಸಲ್ಲಿಸಿ ದೇವರ ಆಶೀರ್ವಾದ ಪಡೆದರು.

### ಇಂದು ವಿದ್ಯುತ್ ವ್ಯತ್ಯಯ

ಚಿತ್ರದುರ್ಗ: ಚಿತ್ರದುರ್ಗ ವಿಭಾಗ ವ್ಯಾಪ್ತಿಯಲ್ಲಿರುವ 220/66/11 ಕೆ.ವಿ ಚಿತ್ರದುರ್ಗ ವಿ.ವಿ. ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕಾರ್ಯಕ್ಕಾಗಿ ವಿ.ವಿ ಕೇಂದ್ರಕ್ಕೆ ಮಾರ್ಗ ಮುಕ್ತತೆ ನೀಡಬೇಕಾಗಿರುವುದರಿಂದ ಈ ವಿ.ವಿ ಕೇಂದ್ರದಿಂದ ವಿದ್ಯುತ್ ಸರಬರಾಜಾಗುವ ಎಲ್ಲಾ ಎನ್.ಜೆ.ವೈ ಮತ್ತು ಕೃಷಿ 11 ಕೆ.ವಿ ಮಾರ್ಗಗಳಲ್ಲಿ ಇದೇ ಜನವರಿ 23ರಂದು ಬೆಳಿಗ್ಗೆ 10 ರಿಂದ ಸಂಜೆ 4 ರವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ವಿದ್ಯುತ್ ಅಡಚಣೆಯಾಗುವ ಪ್ರದೇಶಗಳು: ಕಾಪರ್ ಮೇನ್ಸ್, ಕ್ಯಾದಿಗೆರೆ, ಜೆ.ಎನ್. ಕೋಟೆ, ಕಾಸವರಟ್ಟಿ, ಪಲ್ಲವಗೆರೆ, ಇಂಡಸ್ಟ್ರಿಯಲ್ ಏರಿಯಾ, ಕೋಟೆ, ಜಿಲ್ಲಾ ಪಂಚಾಯತ್, ಸಜ್ಜನಕೆರೆ, ದಂಡಿನಕುರುಬರಹಟ್ಟಿ, ಕೆನ್ನೆಡಲು ಮತ್ತು ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

### ಪ್ರಮುಖ ಸುದ್ದಿ

## ಶ್ರೀರಾಮ ಫೋಟೋಗೆ ಮಾಜಿ ಶಾಸಕ ತಿಪ್ಪಾರೆಡ್ಡಿ ಪೂಜೆ

» ನಮ್ಮ ಜನ ಸಮಾಚಾರ

ಚಿತ್ರದುರ್ಗ : ಉತ್ತರಪ್ರದೇಶದ ಅಯೋಧ್ಯೆಯಲ್ಲಿ ಮರ್ಯಾದಾ ಪುರುಷ ಶ್ರೀರಾಮ ಮಂದಿರ ಪ್ರಾಣ ಪ್ರತಿಷ್ಠಾಪನೆ ನಿಮಿತ್ತ ನಗರದ ವಿವಿಧ ದೇವಾಲಯಗಳಲ್ಲಿ ವಿಶೇಷ ಪೂಜೆ ಸಲ್ಲಿಸಿ ರಾಮನಾಮ ಸ್ಮರಣೆ ಮಾಡಲಾಯಿತು.

ವಿಶ್ವಹಿಂದೂ ಪರಿಷತ್-ಭಜರಂಗದ ಳದಿಂದ ಮೆದೇಹಳ್ಳಿ ರಸ್ತೆಯಲ್ಲಿರುವ ಅಂಡರ್ ಬ್ರಿ□□□□ನಲ್ಲಿ ಶ್ರೀರಾಮನ ಬೃಹಧಾಕಾರವಾದ ಫೋಟೋಗೆ ಪೂಜೆ ಸಲ್ಲಿಸಿ ನಂತರ ಲಡ್ಡು ವಿತರಿಸಲಾಯಿತು.

ಮಾಜಿ ಶಾಸಕ ಜಿ.ಹೆಚ್.ತಿಪ್ಪಾರೆಡ್ಡಿ ಶ್ರೀರಾಮನ ಫೋಟೋಗೆ ಪೂಜೆ ಸಲ್ಲಿಸಿ ಮಾತನಾಡುತ್ತ ದೇಶದ ಪ್ರಧಾನಿ ನರೇಂದ್ರಮೋದಿರವರು ಭಾರತೀಯರ ಆಸೆಯಂತೆ ಅಯೋಧ್ಯೆಯಲ್ಲಿ ಶ್ರೀರಾಮ ಮಂದಿರವನ್ನು ಕಡಿಮೆ ಅವಧಿಯಲ್ಲೆ ನಿರ್ಮಿಸಿ ಲೋಕಾರ್ಪಣೆಗೊಳಿಸುತ್ತಿರುವುದು ಭಾರತದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿದೆ. ಕೇವಲ ಭಾರತದಲ್ಲಷ್ಟೆ ಅಲ್ಲ ವಿದೇಶಗಳಲ್ಲಿರುವ ಕನ್ನಡಿಗರು ರಾಮ ಮಂದಿರ ನಿರ್ಮಾಣದಿಂದಾಗಿ





ಖುಷಿ ಪಡುವಂತಾಗಿದೆ ಎಂದು ಸಂತಸ ವ್ಯಕ್ತಪಡಿಸಿದರು.ರಾಮ ಮಂದಿರ ನಿರ್ಮಾಣಕ್ಕೆ ಕೇಂದ್ರ ಸರ್ಕಾರದಿಂದ ನಯಾ ಪೈಸೆಯನ್ನು ಬಳಸಿಲ್ಲ. ಭಕ್ತರು ನೀಡಿದ ಹಣದಿಂದಲೆ ರಾಮ ಮಂದಿರ ನಿರ್ಮಾಣವಾಗಿದೆ. ಮುಂದಿನ ದಿನಗಳಲ್ಲಿ ಕೃಷ್ಣನ ದೇವಾಲಯವನ್ನು ನಿರ್ಮಾಣ ಮಾಡಲಾಗುವುದು ಎಂದರು. ಮೊಗಲರ ಕಾಲದಲ್ಲಿ ಭಾರತದಲ್ಲಿ ಹಿಂದೂ ದೇವಾಲಯಗಳು ದಾಳಿಗೆ ಒಳಪಟ್ಟಿದ್ದು, ಅಂತಹ ಎಲ್ಲಾ ದೇವಾಲಯಗಳನ್ನು ನಿರ್ಮಾಣ ಮಾಡಲಾಗುವುದು. ನಮ್ಮ ದೇಶದ ಪ್ರಧಾನಿ ಮೋದಿರವರು ಶ್ರೀರಾಮನ ಪ್ರಾಣ ಪ್ರತಿಷ್ಠಾಪನೆ ನೆರವೇರಿಸುವ ಮೂಲಕ ಭಾರತದ ಸಂಸ್ಕೃತಿಯನ್ನು ಎತ್ತಿಹಿಡಿದಿದ್ದಾರೆಂದು ಗುಣಗಾನ ಮಾಡಿದರು.ಹದಿನಾರು ರಾಜ್ಯಗಳಲ್ಲಿ ರಜೆ ಘೋಷಿಸಿ ಶ್ರೀರಾಮನ ಪ್ರಾಣ ಪ್ರತಿಷ್ಠಾಪನೆಗೆ ಗೌರವ ಸಲ್ಲಿಸಲಾಗಿದೆ. ಕರ್ನಾಟಕ,ತಮಿಳುನಾಡು,ಕೇರಳದಲ್ಲಿ ರಜೆ ಘೋಷಿಸಿಲ್ಲ. ವಿರೋಧ ಪಕ್ಷದವರು ಇಲ್ಲ ಸಲ್ಲದ ಅಪವಾದ ಮಾಡುತ್ತಿರುವುದರಲ್ಲಿ ಅರ್ಥವಿಲ್ಲ. ತಮಿಳುನಾಡಿನಲ್ಲಿ ಎಲ್ಲಿಯೂ ಶಾಮಿಯಾನ ಹಾಕಿ ಶ್ರೀರಾಮನ ಪೂಜೆ ನಡೆಸಬಾರದೆಂದು ಜನತೆಯಲ್ಲಿ ಭಯದ ವಾತಾವರಣ ನಿರ್ಮಿಸಲಾಗಿದೆ ಎಂದು ಜಿ.ಹೆಚ್.ತಿಪ್ಪಾರೆಡ್ಡಿ ಆಕ್ರೋಶ ವ್ಯಕ್ತಪಡಿಸಿದರು.

ಬಿಜೆಪಿ. ಮಾಜಿ ಜಿಲ್ಲಾಧ್ಯಕ್ಷ ಜಿ.ಎಂ.ಸುರೇಶ್, ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಭದ್ರಿನಾಥ್, ನಗರಸಭೆ ಸದಸ್ಯಸ ಸುರೇಶ್, ಭಜರಂಗದಳ ನಗರ ಸಂಚಾಲಕ ರಂಗನಾಥ್, ವಿಶ್ವಹಿಂದೂ ಪರಿಷತ್ ಸಹ ಕಾರ್ಯದರ್ಶಿ ಕೇಶವ್, ಡಾ.ಸಿದ್ದಾರ್ಥ, ಭಾನುಮೂರ್ತಿ ಈ ಸಂದರ್ಭದಲ್ಲಿದ್ದರು.

## ಫಾಸ್ಟ್ ನ್ಯೂಸ್


### ಕಾಂಗ್ರೆಸ್ ಅಸಂಘಟಿತ ಕಾರ್ಮಿಕ ವಿಭಾಗದ ಉಪಾಧ್ಯಕ್ಷ ರಾಜಪ್ಪ ಭೇಟಿ ಮಾಡಿದ ಚಂದ್ರಪ್ಪ



» ಚಿತ್ರದುರ್ಗ

ಕಳೆದ ಪಾರ್ಲಿಮೆಂಟ್ ಚುನಾವಣೆಯಲ್ಲಿ ಪರಾಭಗೊಂಡ ಮಾಜಿ ಸಂಸದ ಬಿ.ಎನ್.ಚಂದ್ರಪ್ಪ ಈ ಬಾರಿಯ ಲೋಕಸಭೆ ಚುನಾವಣೆಯಲ್ಲಿ ಸ್ಪರ್ಧಿಸಲು ಈಗಾಗಲೆ ತಯಾರಿ ನಡೆಸುತ್ತಿದ್ದು, ಜಿಲ್ಲಾ ಕಾಂಗ್ರೆಸ್ ಅಸಂಘಟಿತ ಕಾರ್ಮಿಕ ವಿಭಾಗದ ಉಪಾಧ್ಯಕ್ಷ ಎಲ್.ಬಿ.ರಾಜಪ್ಪ ನವರನ್ನು ಹೊಳಲ್ಕೆರೆ ತಾಲ್ಲೂಕು ಮಲ್ಲಾಡಿ ಹಳ್ಳಿಯಲ್ಲಿ ಸೌಹಾರ್ದಯುತವಾಗಿ ಭೇಟಿಯಾಗಿ ಪಾರ್ಲಿಮೆಂಟ್ ಚುನಾವಣೆಯಲ್ಲಿ ಗೆಲುವಿಗೆ ಶ್ರಮಿಸುವಂತೆ ಮನವಿ ಮಾಡಿದರು.

### ಕಣಿವೆಮಾರಮ್ಮ ದೇವಸ್ಥಾನ ಮುಂಭಾಗ ಶ್ರೀರಾಮನ ಪೋಟೋ ಇಟ್ಟು ಪೂಜೆ



» ನಮ್ಮ ಜನ ಸಮಾಚಾರ

ಚಿತ್ರದುರ್ಗ : ಅಯೋಧ್ಯೆಯಲ್ಲಿ ಶ್ರೀರಾಮನ ಪ್ರಾಣ ಪ್ರತಿಷ್ಠಾಪನೆ ಪ್ರಯುಕ್ತ ನಗರದ ಆನೆಬಾಗಿಲು ಸಮೀಪವಿರುವ ಗಣಪತಿ ಹಾಗೂ ಆಂಜನೇಯಸ್ವಾಮಿ, ವೆಂಕಟೇಶ್ವರ ದೇವಸ್ಥಾನದಲ್ಲಿ ವಿಜೃಂಭಣೆಯಿಂದ ಪೂಜೆ ಸಲ್ಲಿಸಲಾಯಿತು.

ನೂರಾರು ಭಕ್ತರು ಧಾವಿಸಿ ಗಣಪತಿ ಹಾಗೂ ಆಂಜನೇಯನ ದರ್ಶನ ಪಡೆದು ಶ್ರದ್ಧಾ ಭಕ್ತಿಯನ್ನು ಸಮರ್ಪಿಸಿ ಶ್ರೀರಾಮನ ಜಪ ಮಾಡಿದರು.

ನಗರ ಪೊಲೀಸ್ ಠಾಣೆ ಆವರಣದಲ್ಲಿರುವ ಕಣಿವೆಮಾರಮ್ಮ ದೇವಸ್ಥಾನದ ಮುಂಭಾಗ ಶ್ರೀರಾಮನ ಬೃಹದಾಕಾರವಾದ ಪೋಟೋ ಇಟ್ಟು ಪೂಜೆ ಸಲ್ಲಿಸಲಾಯಿತು. ಕೋಟೆ ರಸ್ತೆಯಲ್ಲಿರುವ ಮಲ್ಲಿಕಾರ್ಜುನಸ್ವಾಮಿ ಹಾಗೂ ಬರಗೇರಮ್ಮ, ನೀಲಕಂಠೇಶ್ವರಸ್ವಾಮಿ ದೇವಾಲಯಗಳಲ್ಲಿ ಪೂಜೆ ನಡೆಯಿತು. ಬಹುತೇಕ ದೇವಾಲಯಗಳಲ್ಲಿ ಕೋಸಂಬರಿ ಪಾನಕ ವಿತರಿಸಲಾಯಿತು. ನಗರದ ಮುಖ್ಯ ರಸ್ತೆಗಳಲ್ಲಿ ಶ್ರೀರಾಮನ ಭಾವಚಿತ್ರವಿರುವ ಕೇಸರ ಭಾವುಟಗಳು ರಾರಾಜಿಸಿದವು. ಅಲ್ಲಲ್ಲಿ ಆಟೋ ನಿಲ್ದಾಣ, ವಾಣಿಜ್ಯ ಮಳಿಗೆಗಳ ಮೇಲೆ ಹಾಗೂ ವಿದ್ಯುತ್ ಕಂಬಗಳಿಗೆ ಶ್ರೀರಾಮನ ಪೋಟೋ ಕಟ್ಟಿ ಪೂಜಿಸಲಾಯಿತು.

### ಹಳಿಯೂರಿನ ಆಂಜನೇಯಸ್ವಾಮಿ ದೇವಸ್ಥಾನದಲ್ಲಿ ಪೂಜೆ

» ನಮ್ಮ ಜನ ಸಮಾಚಾರ

ಚಿತ್ರದುರ್ಗ ಭೀಮಸಮುದ್ರರಸ್ತೆಹಳಿಯೂರಿನಲ್ಲಿರುವ ಆಂಜನೇಯಸ್ವಾಮಿ ದೇವಸ್ಥಾನದಲ್ಲಿ ವಿಶೇಷವಾಗಿ ಅಲಂಕರಿಸಿ ಶ್ರದ್ಧಾಭಕ್ತಿಯಿಂದ ಶ್ರೀರಾಮನನ್ನು ಪೂಜಿಸಲಾಯಿತು.ಅಯೋಧ್ಯೆಯಲ್ಲಿ ಶ್ರೀರಾಮನ ಪ್ರಾಣ ಪ್ರತಿಷ್ಠಾಪನೆ ಪ್ರಯುಕ್ತ ನಡೆದ ವಿಶೇಷ ಪೂಜೆಯಲ್ಲಿ ಹಳಿಯೂರು ಹಾಗೂ ಸುತ್ತಮುತ್ತಲಿನ ಗ್ರಾಮದ ಸಾವಿರಾರು ಜನತೆ ಭಕ್ತಿ ಸಲ್ಲಿಸಿದರು.ಪೂಜೆಯ ನಂತರ ಅನ್ನಸಂತರ್ಪಣೆ ಏರ್ಪಡಿಸಲಾಗಿತ್ತು.ಅಖಂಡ ಕರ್ನಾಟಕ ರೈತ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಂ.ಸಿದ್ದಪ್ಪ ಹಳಿಯೂರು, ಮೇಘರಾಜ್, ಎಸ್.ಎಂ.ಶಿವಕುಮಾರ್, ವಿ.ಶ್ರೀಕಂಠಪ್ಪ, ಎ.ನಾಗರಾಜ್, ಮಲ್ಲಿಕಾರ್ಜುನ, ಷಣ್ಮುಖಪ್ಪ, ನಾಗರಾಜ್ ಬಿ. ದಿವಾಕರ್, ಶ್ರೀನಿವಾಸ್, ಆನಂದ್, ಪ್ರಕಾಶ್, ರವಿ, ಎಂ.ಚಂದ್ರಪ್ಪ, ಸೈಫುಲ್ಲಾ ಗ್ರಾಮ ಪಂಚಾಯಿತಿ ಸದಸ್ಯರುಗಳಾದ ಪಿ.ನಾಗರಾಜ್, ಪಾಲಾಕ್ಷ, ಮಮತ, ಗಿರೀಶ್ ಇನ್ನು ಅನೇಕರು ಪೂಜೆಯಲ್ಲಿ ಭಾಗವಹಿಸಿ ಸಂಭ್ರಮಿಸಿದರು.

# ಮಾದಕ ದ್ರವ್ಯ ಸೇವನೆ ತಳಮಟ್ಟದಿಂದ ತೊಡೆದು ಹಾಕಬೇಕು: ಜಿಲ್ಲಾ ನ್ಯಾ.ರಾಜೇಶ್ವರಿ ಎನ್.ಹೆಗಡೆ

» ದಾವಣಗೆರೆ

ಮಾದಕ ದ್ರವ್ಯ ಸೇವನೆಯನ್ನು ದೇಶದಲ್ಲಿ ತಳಮಟ್ಟದಿಂದ ತೊಡೆದು ಹಾಕುವ ಪ್ರಯತ್ನ ನಡೆಯಬೇಕು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರಾದ ರಾಜೇಶ್ವರಿ ಎನ್ ಹೆಗಡೆ ತಿಳಿಸಿದರು.

ಎಸ್.ಎಸ್ ಮಲ್ಲಿಕಾರ್ಜುನ ನಗರದಲ್ಲಿರುವ ಸರ್ಕಾರಿ ಕನ್ನಡ ಮತ್ತು ಉರ್ದು ಪ್ರೌಢಶಾಲೆಯಲ್ಲಿ ಜಿಲ್ಲಾ ತಂಬಾಕು ನಿಯಂತ್ರಣ ಕೋಶ, ಶಿಕ್ಷಣ ಇಲಾಖೆ, ಜಿಲ್ಲಾ ವಕೀಲರ ಸಂಘ, ನೆರಳು ಬೀಡಿ ಕಾರ್ಮಿಕರ ಯೂನಿಯನ್ ಇವರ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಮಾದಕ ವಸ್ತುಗಳ ಸೇವನೆ ನಿಷೇಧ ಹಾಗೂ ದುರ್ಬಳಕೆ ಬಗ್ಗೆ ಕಾನೂನು ಅರಿವು ಜಾಗೃತಿ ಜಾಥ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ತಂಬಾಕು ಸೇವನೆಯು ಜಾಗತಿಕ ಅಸ್ವಸ್ಥತೆ ಮತ್ತು ಮರಣಕ್ಕೆ ಪ್ರಮುಖ ಕಾರಣ, ಇದರಿಂದ ಪ್ರಸ್ತುತ ಪ್ರತಿ ವರ್ಷ 8 ದಶಲಕ್ಷಕ್ಕೂ ಹೆಚ್ಚು ಸಾವುಗಳು ಸಂಭವಿಸುತ್ತಿದೆ. ಇತ್ತೀಚಿನ ದಿನಗಳಲ್ಲಿ ಗಾಂಜಾ ಸೇವನೆಗೆ ಯುವ ಜನತೆ ಬಲಿಯಾಗುತ್ತಿದ್ದು, ಯುವಕರ ಜೀವನವೇ ಶೂನ್ಯವಾಗುತ್ತಿದೆ. ಶಾಲಾ ಕಾಲೇಜುಗಳ ಸುತ್ತಲೂ ಗಾಂಜಾ ಸೇವನೆ ಹೆಚ್ಚಾಗಿದ್ದು ಯುವಕರು ಈ ಸೇವನೆಯನ್ನು ಬಹಿಷ್ಕರಿಸಬೇಕು.

ಮಾದಕವ್ಯಸನಿಗಳಲ್ಲಿಶೇ.50ಕ್ಕೂಹೆಚ್ಚು10ರಿಂದ 20 ವರ್ಷದೊಳಗಿನ ವಿದ್ಯಾರ್ಥಿಗಳೇ ಇದ್ದಾರೆ. ದಿನದಿನಕ್ಕೆ ಕೋರ್ಸುಗಳು, ಪದವಿಗಳು, ತೆಗೆದುಕೊಳ್ಳುವ ಅಂಕಗಳ ಸಂಖ್ಯೆ ಹೆಚ್ಚಾಗುವುದಕ್ಕಿಂತ ವೇಗವಾಗಿ ಮಾದಕದ್ರವ್ಯಗಳ ಚಟಕ್ಕೆ ಬಲಿಯಾಗುವ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚುತ್ತಿದೆ. ಗೆಳೆಯರೊಂದಿಗೆ ಮೋಜಿಗಾಗಿ ಮಾದಕ ವ್ಯಸನವು ಒಬ್ಬರ ಜೀವನವನ್ನೆ ಹಾಳುಮಾಡುತ್ತದೆ. ಡ್ರಗ್ಸ್ ದುರುಪಯೋಗವು ವ್ಯಕ್ತಿಯ ದೇಹಕ್ಕೆ ಹಾನಿಯಾಗುವ ರೀತಿಯಲ್ಲಿ ಔಷಧಿಗಳ ಬಳಕೆಯಲ್ಲೂ ಸೂಚಿಸುತ್ತದೆ. ಮಿತಿಗಿಂತ ಹೆಚ್ಚು ಔಷಧಿಗಳನ್ನು ತೆಗೆದುಕೊಂಡರೆ, ಅವು ದೇಹದಲ್ಲಿ ಋಣಾತ್ಮಕವಾಗಿ ಪರಿಣಾಮ ಬೀರುತತವಲ್ಲದೆ ಜೀವಕ್ಕೆ ದೊಡ್ಡ ಬೆದರಿಕೆಯನ್ನುಂಟು ಮಾಡುತ್ತವೆ. ಇದು ಗಂಭೀರ ಮಾನಸಿಕ ಮತ್ತು ದೈಹಿಕ ಕ್ಷೀಣತೆಗೆ ಕಾರಣವಾಗಿದೆ ಎಂದರು.



ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ.ಮ. ಕರೆಣ್ಣವರ ಮಾತಾನಾಡಿ, ತಂಬಾಕಿನಿಂದ ವಿಶ್ವವು ಎದುರಿಸಿದ ಅತಿದೊಡ್ಡ ಸಾರ್ವಜನಿಕರ ಆರೋಗ್ಯ ಸಮಸ್ಯೆಗಳಲ್ಲಿ ಒಂದಾಗಿದೆ. ಅತಿ ಹೆಚ್ಚು ಜನರು ತಂಬಾಕು ಸೇವನೆಯಿಂದ ಸಾವುಗಳನ್ನು ಅನುಭವಿಸುತ್ತಿದ್ದಾರೆ. ತಂಬಾಕು ಬಳಕೆಯು ಮನೆಯ ಖರ್ಚು ಹೆಚ್ಚಿಸುತ್ತದೆ. ತಂಬಾಕು ಸಂಬಂಧಿತ ಕಾಯಿಲೆ ಮತ್ತು ಸಾವಿನ ಸಂಖ್ಯೆ ಹೆಚ್ಚಾಗುತ್ತದೆ. ಧೂಮಪಾನ ಮೂಲಕ ಸುತ್ತಮುತ್ತಲಿನ ಜನರ ಮೇಲದಿದು ಪರಿಣಾಮ ಬೀರುತ್ತದೆ.

ತಂಬಾಕಿನಿಂದ ಎಲ್ಲ ನಾಗರಿಕರ ಆರೋಗ್ಯ ಮತ್ತು ಯೋಗಕ್ಷೇಮಕ್ಕೆ ದೊಡ್ಡ ಅಪಾಯವಾಗಿದೆ. ತಂಬಾಕು ಸೇವನೆ ಅಪರಾಧವಲ್ಲ, ತಂಬಾಕು ನಿಷೇಧವು ಕೂಡ ಆಗಿರುವುದಿಲ್ಲ. ಕೆಲವು ಜನರು ತಂಬಾಕು ತಯಾರಿಸಲು ಲೈಸೆನ್ಸ್ ತೆಗೆದುಕೊಂಡಿರುತ್ತಾರೆ. ಮಾದಕವಸ್ತು ಬಳಕೆದಾರರಆರೋಗ್ಯದಮೇಲೆಪರಿಣಾಮ ಬೀರುವುದಲ್ಲದೆ ಅವರ ಕೌಟುಂಬಿಕ ಜೀವನವನ್ನು ಹಾಳುಮಾಡುತ್ತದೆ. ಸ್ನೇಹಿತರು ಮತ್ತು ಸಮಾಜದೊಂದಿಗೆ ಅವರ ಸಂಬಂಧವು ದಿನದಿಂದ ದಿನಕ್ಕೆ ಕ್ಷೀಣಿಸಲು ಪ್ರಾರಂಭಿಸುತ್ತದೆ. ಇದು ಖಿನ್ನತೆ ಮತ್ತು ಆತಂಕದ ಸಮಸ್ಯೆಗಳಿಗೆ ಕಾರಣವಾಗುತ್ತದೆ. ಕೆಲವೊಮ್ಮೆ, ಈ ಮಾದಕ ವ್ಯಸನವು ಅನೇಕ ಜನರಿಗೆ ಮಾರಕವಾಗಿದೆ ಮತ್ತು ಅಂತಿಮವಾಗಿ ಒಬ್ಬರ ಜೀವನವನ್ನು ಸಂಪೂರ್ಣವಾಗಿ ನಾಶಪಡಿಸುತ್ತದೆ ಎಂದರು.

ಜಿಲ್ಲಾ ಸರ್ವೇಕ್ಷಣಾಧಿಕಾರಿ ಮತ್ತು ರಾಷ್ಟ್ರೀಯ ತಂಬಾಕು ನಿಯಂತ್ರಣದ ಕಾರ್ಯಕ್ರಮ ಅಧಿಕಾರಿ ಡಾ.ರಾಘವನ್ ಮಾತಾನಾಡಿ ತಂಬಾಕನ್ನು ಅತಿ ಹೆಚ್ಚಾಗಿ ಹೊನ್ನಾಳಿಯಲ್ಲಿ ಬೆಳೆಯುತ್ತಿದ್ದಾರೆ. ರೋಗಿಗಳು ಡಾಕ್ಟರ್ ಸಲಹೆ ಇಲ್ಲದೇ ಯಾವುದೇ ಔಷಧಿಗಳನ್ನು ಪಡೆಯಬಾರದು. ಸಲಹೆ ಇಲ್ಲದೆ ಔಷಧಿ ನೀಡಿದ್ದಲ್ಲಿ ದೂರು ಸಲ್ಲಿಸಲು ಕೆಲವು ಇಲಾಖೆಗಳಿವೆ, ಅಂತಹ ಇಲಾಖೆಗಳಿಗೆ ದೂರು ನೀಡಬೇಕು. ತಂಬಾಕಿನಿಂದ ಆರೋಗ್ಯದ ಮೇಲೆ ತುಂಬಾ ಪರಿಣಾಮ ಬೀರುತ್ತದೆ. ಬಾಯಿಯ ಕ್ಯಾನ್ಸರ್, ನಾಲಿಗೆ, ಧ್ವನಿಪೆಟ್ಟಿಗೆ ಮತ್ತು ಗಂಟಲಕುಳಿ, ಅನ್ನನಾಳ, ಹೊಟ್ಟೆ, ಪಿತ್ತಕೋಶ, ಮೂತ್ರಕೋಶ, ಗರ್ಭಾಶಯದ, ಗರ್ಭಕಂಠ ಮತ್ತು ಶ್ವಾಸಕೋಶದ ಕ್ಯಾನ್ಸರ್. ಹೃದಯ ನಾಳ ಕಾಯಿಲೆಗಳು ಮತ್ತು ದೀರ್ಘಕಾಲದ ಪ್ರತಿರೋಧಕ ಶ್ವಾಸಕೋಶದ ಕಾಯಿಲೆಗಳು ಸಂಭವಿಸಬಹುದು. ಶೇ.40ರಷ್ಟು ಟಿ.ಬಿ ಮತ್ತು ಇತರ ಸಂಬಂಧಿತ ಕಾಯಿಲೆಗಳು ತಂಬಾಕು ಸೇವನೆಯಿಂದ ಬರುತ್ತವೆ. ಸಾರ್ವಜನಿಕ ಸ್ಥಳಗಳಲ್ಲಿ ಜನರು ಸಿಗರೇಟ್, ಬೀಡಿ ಮತ್ತು ತಂಬಾಕು ಉತ್ಪನ್ನಗಳನ್ನು ಬಳಸಿದಾಗ ಅದರಿಂದ ಉಂಟಾಗುವ ಹೊಗೆಯು, ಆ ಸ್ಥಳವನ್ನು ಆವರಿಸಿ ಅಲ್ಲಿರುವ ಜನರು ಅದನ್ನು ಉಸಿರಾಟದ ಮೂಲಕ ಸೇವಿಸುವಂತಾದರೆ, ಅದನ್ನು ಪರೋಕ್ಷ ಧೂಮಪಾನವಾಗಿ ಸಂಭವಿಸುತ್ತವೆ. ಈ ಭೀತಿಯನ್ನು ತಡೆಗಟ್ಟಲು ಎಲ್ಲಾ ರೆಸ್ಟೋರೆಂಟ್ ಧೂಮಪಾನ ಮುಕ್ತವಾಗಿಡಲು ಘೋಷಣೆ ಹೊರಡಿಸಿದೆ. ಇದಲ್ಲದೆ ನಾನ್ ಸ್ಮೋಕರ್‌ಗಳ ಹಿತಾಸಕ್ತಿ ಕಾಪಾಡಲು 30 ಅಥವಾ ಅದಕ್ಕಿಂತ ಹೆಚ್ಚಿನ ಆಸನವಿರುವ ರೆಸ್ಟೋರೆಂಟ್‌ಗಳಲ್ಲಿ ಗೊತ್ತುಪಡಿಸಿದ ಧೂಮಪಾನ ಪ್ರದೇಶವೆಂದು ಘೋಷಿಸಲಾಗಿದೆ.

ಧೂಮಪಾನ ಮಾಡುವುದರಿಂದ ಗಂಟಲು ಕ್ಯಾನ್ಸರ್ ಸಂಭವಿಸುವುದು. ಬೀಡಿ, ಸಿಗರೇಟಿನ ಹೊಗೆಯಲ್ಲಿ ಕ್ಯಾನ್ಸರ್ ರೋಗಕ್ಕೆಮೂಲವಾದ ವಿಷವಸ್ತುವಿರುತ್ತದೆ. ಧೂಮಪಾನ ಮಾಡುವುದರಿಂದ ದೇಹಕ್ಕೆ ಆಮ್ಲಜನಕದ ಕೊರತೆಯುಂಟಾಗುವ ದೆಸೆಯಿಂದ ಮೆದುಳಿಗೆ ಹಾನಿ ತಟ್ಟುವುದು, ಹಸಿವು ಮುಚ್ಚಿಹೋಗುವುದು, ನಿದ್ರಾನಾಶವಾಗುವುದು. ಹೊಗೆಸೊಪ್ಪಿನಲ್ಲಿರುವ ನಿಕೋಟಿನ್ ಎಂಬ ವಿಷವಸ್ತುವಿನ ಪ್ರಭಾವದಿಂದ ಜಠರದಲ್ಲಿ ಆಮ್ಲದ ಉತ್ಪತ್ತಿ ಹೆಚ್ಚುವುದು, ಇದರ ದೆಸೆಯಿಂದ ಹೊಟ್ಟೆ ಹುಣ್ಣು ಪ್ರಾಪ್ತವಾಗುವುದು. ಧೂಮಪಾನ ಮಾಡುವ ದೆಸೆಯಿಂದ ರಕ್ತನಾಳಗಳು ಗಾತ್ರದಲ್ಲಿ ಕುಗ್ಗುತ್ತವೆ. ಆದುದರಿಂದ ವ್ಯಕ್ತಿಯು ಅಧಿಕ ರಕ್ತದ ಒತ್ತಡದಿಂದ ನರಳುವ ಸಂಭವವುಂಟು. ಧೂಮಪಾನ ಮಾಡುವುದರಿಂದ ಮೆದುಳಿನ ಕ್ರಿಯಾಶಕ್ತಿ ಹೆಚ್ಚಿಸುವುದು. ಈ ದೆಸೆಯಿಂದ ಕಾಲ ಕ್ರಮೇಣ ವ್ಯಕ್ತಿಯು ನರದೌರ್ಬಲ್ಯಕ್ಕೆ ಒಳಗಾಗುತ್ತಾನೆ.ಕಾಯ್ದೆ 4ರಡಿ ತಂಬಾಕು ಸೇವನೆ ಮಾಡಿದರೆ ರೂ.200 ದಂಡ ವಿಧಿಸಲಾಗುವುದು. ಕಾಯ್ದೆ 5 ರಡಿ ಅಂಗಡಿಯವರು ಜಾಹೀರಾತು ಪ್ರದರ್ಶನ ಮಾಡುವಂತಿಲ್ಲ, ಕಾಯ್ದೆ 6ಎ 18 ವರ್ಷದೊಳಗಿನವರು ತಂಬಾಕು ಮಾರಾಟ ಮಾಡುವಂತಿಲ್ಲ. ಕಾಯ್ದೆ 6ಬಿ ಶಾಲೆಯ 100 ಗಜದ ಒಳಗೆ ಸಿಗರೇಟ್ ಮಾರಾಟ ಮಾಡುವಂತಿಲ್ಲ. ಕಾಯ್ದೆ7 ರಡಿ ಯಾವುದೇ ಬೀಡಿ, ಸಿಗರೇಟ್, ತಂಬಾಕುಗಳ ಮೇಲೆ ಅಪಾಯಕಾರಿ ಎಂದು ಎಚ್ಚರಿಕೆ ಸಂದೇಶ ನಮೂದಿಸಿರಬೇಕು ಎಂದರು.

ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ವಿಜಯಕುಮಾರ್ ಎಂ.ಸಂತೋಷ್, ಅಜಾದ್ ನಗರದ ಪೊಲೀಸ್ ಅಧಿಕಾರಿ ಇಮಾಮ್ ಬೇಗ್, ನೆರಳು ಬೀಡಿ ಕಾರ್ಮಿಕರ ಯೂನಿಯನ್ ಅಧ್ಯಕ್ಷರಾದ ಜಬೀನಾ ಖಾನಂ, ಕಾರ್ಯದರ್ಶಿ ಎಂ.ಕರಿಬಸಪ್ಪ ಉಪಸ್ಥಿತರಿದ್ದರು.

# ಇಂದಿನ ಚಿತ್ರದುರ್ಗ ಬಂದ್‌ಗೆ ಬಿಜೆಪಿ ಬೆಂಬಲ

» ಚಿತ್ರದುರ್ಗ

ಭದ್ರಾ ಮೇಲ್ದಂಡೆ ಯೋಜನೆ ತ್ವರಿತ ಅನುಷ್ಠಾನಕ್ಕೆ ಆಗ್ರಹಿಸಿ ಜಿಲ್ಲಾ ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಸೇರಿ ವಿವಿಧ ಸಂಘಟನೆಗಳು ಜ. 23ರಂದು ಕರೆ ನೀಡಿರುವ ಚಿತ್ರದುರ್ಗ ಬಂದ್ ಬಿಜೆಪಿ ಬೆಂಬಲಿಸಲಿದೆ ಎಂದು ಎಂಎಲ್ಸಿ ಕೆ.ಎಸ್.ನವೀನ್ ತಿಳಿಸಿದರು.ಭಾನುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಯೊಜನೆಗೆ ಮೊದಲು ಅನುದಾನ ಬಿಡುಗಡೆ ಮಾಡಿದ್ದು, ಬಿಜೆಪಿ. ರಾಜ್ಯದಲ್ಲಿ ಎರಡು ಬಾರಿ ಅಧಿಕಾರದಲ್ಲಿದ್ದ ವೇಳೆಯೂ ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್. ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ, ಸದಾನಂದಗೌಡ ಅವರು ಸಾಕಷ್ಟು ಅನುದಾನ ಬಿಡುಗಡೆ ಮಾಡಿದ್ದಾರೆ. ಆದರೆ, ಕಾಂಗ್ರೆಸ್ ಅವಧಿಯಲ್ಲಿ ನೆನೆಗುದಿಗೆ ಬಿದ್ದಿದೆ ಎಂದು ದೂರಿದರು. ಈ ಯೋಜನೆ ಪೂರ್ಣಗೊಂಡ ಬಳಿಕ ಕೃಷಿ ಸಿಂಚಾಯಿ ಯೋಜನೆಯಡಿ ರೈತರ ಜಮೀನುಗಳಿಗೆ ನೀರು ಹರಿಸಲು ಕೇಂದ್ರ ಸರ್ಕಾರ 2023ರ ಬಜೆಟ್‌ನಲ್ಲಿ 5,300 ಕೋಟಿ ರೂ. ಅನುದಾನ ಮೀಸಲಿಟ್ಟಿದೆಯೇ ಹೊರತು ಮುಖ್ಯ ಕಾಮಗಾರಿಗಾಗಿ ಅಲ್ಲ. ಆದರೆ, ಕಾಂಗ್ರೆಸ್ ನಾಯಕರು ಜನರ ದಿಕ್ಕು ತಪ್ಪಿಸುವ ಹೇಳಿಕೆ ನೀಡಿ ಗೊಂದಲ ಸೃಷ್ಟಿಸುತ್ತಿರುವುದು ಎಷ್ಟು ಸರಿ ಎಂದು ಪ್ರಶ್ನಿಸಿದರು.




ರಾಜ್ಯ ಸರ್ಕಾರವೂ ತನ್ನ ಬಜೆಟ್‌ನಲ್ಲಿ 2,700 ಕೋಟಿ ರೂ. ಮೀಸಲಿಟ್ಟಿದೆ. ಆದರೆ, ಎಷ್ಟು ಬಿಡುಗಡೆ ಮಾಡಿದೆ, ಕಾಮಗಾರಿ ಯಾವ ಹಂತದಲ್ಲಿದೆ ಎಂಬುದನ್ನೇ ಸ್ಪಷ್ಟಪಡಿಸುತ್ತಿಲ್ಲ. ಮೊದಲು ಈ ಕುರಿತು ಡಿಸಿಎಂ ದಾಖಲೆ ಸಮೇತ ಮಾಹಿತಿ ನೀಡಲಿ. ಚಿತ್ರದುರ್ಗಕ್ಕೆ ಅವರು ಭೇಟಿ ನೀಡಿದರೆ, ನಾನೇ ಪ್ರಶ್ನಿಸುತ್ತೇನೆ ಎಂದರು.

50 ವರ್ಷದ ಹೋರಾಟದ ಫಲವಾಗಿ ಭದ್ರಾ ಮೇಲ್ದಂಡೆ ಯೋಜನೆ ಕಾಮಗಾರಿ ನಡೆಯುತ್ತಿದೆ. ವಾಣಿವಿಲಾಸ ಸಾಗರ ಜಲಾಶಯಕ್ಕೆ ನೀರು ಹರಿಯಲು ಬಿಜೆಪಿ ಕಾರಣ. ತುಂಗಾದಿಂದ ಭದ್ರಾಗೆ ನೀರು ಲಿಫ್ಟ್ ಮಾಡುವ ಕಾಮಗಾರಿಯನ್ನೇ ಈಗಿನ ಕಾಂಗ್ರೆಸ್ ಸರ್ಕಾರ ಮಾಡಿಲ್ಲ. ಸಿದ್ದರಾಮಯ್ಯ ಅವರು ತ್ವರಿತವಾಗಿ ವೇಗ ನೀಡಿ, ಮುಖ್ಯ ಕಾಮಗಾರಿ ಪೂರ್ಣಗೊಳಿಸಿದರೆ, ಕೇಂದ್ರ ಸರ್ಕಾರದಿಂದ ಅನುದಾನ ತರುವುದು ನಿಶ್ಚಿತ. ನಮ್ಮ ಪಕ್ಷದ ರಾಜ್ಯಾಧ್ಯಕ್ಷರು ಸೇರಿ ಬಿಜೆಪಿಗರು ಈ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಲಿದ್ದಾರೆ ಎಂದರು.

ಬಿಜೆಪಿ ಜಿಲ್ಲಾಧ್ಯಕ್ಷ ಎ.ಮುರಳಿ, ಮುಖಂಡರಾದ ಜಿ.ಎಸ್.ಅನಿತ್‌ಕುಮಾರ್, ಸಂಪತ್, ದಗ್ಗೆ ಶಿವಪ್ರಕಾಶ್, ನಾಗರಾಜ್ ಬೇದ್ರೆ ಇದ್ದರು.

## ವೀರಶೈವ ಸೇವಾ ಸಮಾಜ ಮತ್ತು ಆರ್ಯವೈಶ್ಯ ಸಂಘಟನೆಗಳಿಂದ ಪೂಜೆ.



» ಚಳ್ಳಕೆರೆ

ನಾಡಿನ ಲಕ್ಷಾಂತರ ರಾಮಭಕ್ತರು ಇಂತಹ ಒಳ್ಳೆಯ ಸುದಿನಕ್ಕಾಗಿ ಕಾಯುತ್ತಿದ್ದರು. ದೇವರ ಅನುಗ್ರಹ ಮತ್ತು ಪ್ರಭುಶ್ರೀರಾಮಚಂದ್ರನ ಕೃಪೆಯಿಂದ ಇಂದು ಅಯೋಧ್ಯೆಯಲ್ಲಿ ರಾಮಮಂದಿರ ಲೋಕಾರ್ಪಣೆಯಾಗಿದ್ದು, ಇದು ಹಿಂದೂಸಂಸ್ಕೃತಿಗೆ ಹೊಸ ಶಕ್ತಿಯನ್ನು ತುಂಬಲಿದೆ ಎಂದು ವೀರಶೈವ ಸಮಾಜದ ಮುಖಂಡ ಶಿವಕುಮಾರ್ ತಿಳಿಸಿದರು. ಅವರು, ವೀರಶೈವ ಕಲ್ಯಾಣ ಮಂಟಪದಲ್ಲಿ ರಾಮಮಂದಿರ ಲೋಕಾರ್ಪಣೆ ಹಿನ್ನೆಲೆ ಹಮ್ಮಿಕೊಂಡಿದ್ದ ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

## ಪ್ರಮುಖ ಸುದ್ದಿ

# ಪ್ರಾಣ ಪ್ರತಿಷ್ಠಾಪನೆ: ವಿವಿಧ ದೇವಾಲಯಗಳಲ್ಲಿ ವಿಶೇಷ ಪೂಜೆ

» ಚಿತ್ರದುರ್ಗ

500 ವರ್ಷಗಳ ಸುದೀರ್ಘ ಹೋರಾಟದ ಫಲವಾಗಿ ಅಯೋಧ್ಯೆಯಲ್ಲಿ ಶ್ರೀರಾಮನ ಭವ್ಯ ಮಂದಿರ ತಲೆ ಎತ್ತಿದ್ದು, ಇಂದು ಆ ಮಂದಿರದಲ್ಲಿ ಶ್ರೀ ಬಾಲರಾಮನ ವಿಗ್ರಹಕ್ಕೆ ಪ್ರಾಣ ಪ್ರತಿಷ್ಠಾಪನೆ ನಡೆದಿದೆ. ನೂರಾರು ಋತ್ವಿಜರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಅವರ ಯಜಮಾನಿಕೆಯಲ್ಲಿ ಶ್ರೀಬಾಲರಾಮ ವಿಗ್ರಹಕ್ಕೆ ಪ್ರಾಣ ಪ್ರತಿಷ್ಠಾಪನೆ ಮಾಡಲಾಗಿದೆ.

ನಗರದ ಕೋಟೆನಾಡಿನಲ್ಲಿಂದು ಶ್ರೀರಾಮನ ಪ್ರಾಣ ಪ್ರತಿಷ್ಠಾಪನೆಯ ಅಂಗವಾಗಿ ವಿವಿಧ ದೇವಾಲಯಗಳಲ್ಲಿ ವಿಶೇಷ ಪೂಜೆ ಮತ್ತು ಅಲಂಕಾರಗಳನ್ನು ಮಾಡಲಾಗಿತ್ತು. ಕೋಟೆನಾಡು ಚಿತ್ರದುರ್ಗದಲ್ಲಿ ಹಬ್ಬದ ವಾತಾವರಣ ಮೂಡಿದೆ.

ನಗರದ ಆನೆಬಾಗಿಲ ಬಳಿಯಲ್ಲಿ ರಾಜಾಸ್ತಾನ ಸಮಾಜದವರಿಂದ ಅಯೋಧ್ಯೆಯಲ್ಲಿ ನಿರ್ಮಾಣವಾಗುತ್ತಿರುವ ರಾಮಮಂದಿರದ ಪ್ರತಿ ರೂಪವನ್ನು ನಿರ್ಮಾಣ ಮಾಡಿ ಜನರ ದರ್ಶನಕ್ಕೆ ಇಡಲಾಗಿತು. ಇದರ ಪಕ್ಕದಲ್ಲಿ ಆಯೋದ್ಯಯಲ್ಲಿ ನಡೆಯುತ್ತಿರುವ ರಾಮ ಮಂದಿರದ ರಾಮ ಪ್ರಾಣ ಪ್ರತಿಷ್ಠಾಪನಾ ಸಮಾರಂಭವನ್ನು ವೀಕ್ಷಣೆ ಮಾಡಲು ಎಲ್.ಇ.ಡಿ. ಪರದೆಯನ್ನು ನಿರ್ಮಾಣ ಮಾಡಲಾಗಿತ್ತು. ಆಯೋಧ್ಯಯಲ್ಲಿ ರಾಮಮಂದಿರದ ರಾಮ ಪ್ರಾಣ ಪ್ರತಿಷ್ಠಾಪನ ಸಮಯಕ್ಕೆ ಇಲ್ಲಿಯೂ ಸಹಾ ಪೂಜೆಯನ್ನು ಮಾಡುವುದರ ಮೂಲಕ ಶ್ರೀರಾಮ ಪೂಜೆಯಲ್ಲಿ ಪಾಲ್ಗೊಳ್ಳಲಾಯಿತು.




ಈ ಸಮಾರಂಭದಲ್ಲಿ ರಾಜಸ್ತಾನ ಸಮಾಜದ ಮುಖಂಡರಾದ ಶ್ರೇಣಿಕ್, ವಿಕ್ರಾಂತ್ ಜೈನ್, ವೀರಸಿಂಗ್, ಸುರೇಶ್, ಮಂಗಲಸಿಂಗ್ ಹಾಗೂ ಸೇನಿ, ವಿಷ್ಣು, ಜೈನ್ ಸಮುದಾಯದವರು ಹಾಗೂ ಜ್ಯೂಯಲರಿ ಸಂಘದವರು ಭಾಗವಹಿಸಿದ್ದರು. ಪೂಜೆಯ ನಂತರ ಆಗಮಿಸಿದ ಭಕ್ತಾಧಿಗಳಿಗೆ ಪ್ರಸಾದವನ್ನು ಹಂಚಲಾಯಿತು. ಇದೇ ರೀತಿ ನಗರದ ರಂಗಯ್ಯನ ಭಾಗಿಲ ಬಳಿಯ ಶ್ರೀರಾಮನ ಭಕ್ತಾಧಿಗಳಿಂದ ಆಂಜನೇಯ ಸ್ವಾಮಿ ದೇವಾಲಯದಲ್ಲಿ ವಿಶೇಷವಾದ ಪೂಜೆಯನ್ನು ನಡೆಸುವುದರ ಮೂಲಕ ಆಗಮಿಸಿದ ಭಕ್ತಾಧಿಗಳಿಗೆ ಕೊಸುಂಬರಿ ಪಾನಕದ ಪ್ರಸಾದವನ್ನು ನೀಡಲಾಯಿತು. ಮದಕರಿ ಹಣಪತಿ ದೇವಾಲಯದಲ್ಲಿಯೂ ಸಹಾ ಇಂದು ವಿಶೇಷವಾದ ಆಲಂಕಾರವನ್ನು ಮಾಡುವುದರ ಮೂಲಕ ಶ್ರೀರಾಮನ ಪ್ರಾಣ ಪ್ರತಿಷ್ಠಾಪನಾ ಕಾರ್ಯದಲ್ಲಿ ಭಾಗಿಯಾಗಿದ್ದರು.

ನಗರದ ಕೋಟೆ ಅಂಜನೇಯ ಸ್ವಾಮಿ ದೇವಾಲಯದಲ್ಲಿಯೂ ಸಹಾ ಶ್ರೀರಾಮ ಪ್ರಾಣ ಪ್ರತಿಷ್ಠಾಪನಾ ಅಂಗವಾಗಿ ಪೂಜೆಯನ್ನುನಡೆಸಲಾಯಿತು,ಆನೆಬಾಗಿಲ ಮಲ್ಲಿಕಾರ್ಜನ ಸ್ವಾಮಿ ದೇವಾಲಯದಲ್ಲಿ, ನೀಲಕಂಠೇಶ್ವರ ದೇವಾಲಯದಲ್ಲಿ ಆರ್ಯ ವೈಶ್ಯ ಸಮಾಜದ ಕನ್ನಿಕಾ ಪರಮೇಶ್ವರಿ ಆಮ್ಮನವರದೇವಾಲಯದಲ್ಲಿ,ಬರಗೇರಮ್ಮ ದೇವಾಲಯದಲ್ಲಿ, ಪಾಂತಾಳ ಲಿಂಗೇಶ್ವರ ದೇವಾಲಯ, ಗ್ರಾಮ ದೇವತೆಯಾದ ಉಚ್ಚಂಗಿಯಲ್ಲಮ್ಮ ದೇವಾಲಯ, ಕಣಿವೆ ಮಾರಮ್ಮ ದೇವಾಲಯ, ಅಯ್ಯಪ್ಪಸ್ವಾಮಿ ದೇವಾಲಯದಲ್ಲಿ ಡಿಎಆರ್ ಬಳಿಯ ಶ್ರೀರಕ್ಷಾ ಆಂಜನೇಯ, ಜೆಸಿಆರ್ ಗಣಪತಿ ದೇವಾಲಯದಲ್ಲಿ ವಿಶೇಷವಾದ ಪೂಜೆಯನ್ನು ನಡೆಸಲಾಯಿತು.

ದೇಶದ ಎಲ್ಲೆಡೆ ಮೊಳಗುತ್ತಿದೆ ಶ್ರೀರಾಮ ಜಯಘೋಷ. ಕೋಟ್ಯಂತರ ಹಿಂದೂಗಳ ಐದು ದಶಕಗಳ ಕನಸು ಈಡೇರಿದ್ದು, ಈ ಸಂಭ್ರಮವನ್ನು ಯುವಕರು ತಮ್ಮದೇ ಆದ ರೀತಿಯಲ್ಲಿ ವ್ಯಕ್ತಪಡಿಸುತ್ತಿದ್ದಾರೆ. ಈ ನಡುವೆ ಯುವ ಸಮುದಾಯ ಪ್ರಭು ಶ್ರೀರಾಮನ ಟ್ಯಾಟೂ ಹಾಕಿಸಿಕೊಂಡು ಭಕ್ತಿ ಮೆರೆಯುತ್ತಿದ್ದಾರೆ. ಚಿತ್ರದುರ್ಗದಲ್ಲಿ ಯುವಕರು ಅಯೋಧ್ಯೆ ರಾಮ ಮಂದಿರ, ರಾಮ–ಹನುಮಂತನ ಟ್ಯಾಟೂ ಹಾಕಿಸಿಕೊಂಡಿದ್ದಾರ. ಕೆಲ ದಿನಕ್ಕೆ ಟ್ರೆಂಡ್ ಶುರುವಾಗಿ 150ಕ್ಕೂ ಹೆಚ್ಚು ಜನರ ಕೈ, ಎದೆಯ ಮೇಲೆ ಪ್ರಭು ಶ್ರೀರಾಮನ ಚಿತ್ರ ಮೂಡಿದೆ. ಅಯೋಧ್ಯಾ ಶ್ರೀರಾಮ ಮಂದಿರ ಪ್ರಾಣ ಪ್ರತಿಷ್ಠಾಪನೆ ಅಂಗವಾಗಿ ಚಿತ್ರದುರ್ಗ ನಗರ ಮಾಳಪ್ಪನಹಟ್ಟಿಯಲ್ಲಿ ಶ್ರೀರಾಮ, ಸೀತಾ, ಲಕ್ಷಣ ಮತ್ತು ಆಂಜನೇಯ ಪಾತ್ರಧರಿಸಿ ಗ್ರಾಮದಲ್ಲಿ ಭಜನೆ ನೆರವೇರಿಸಿ ಶ್ರೀ ಆಂಜನೇಯ ದೇವಸ್ಥಾನದ ಮೂಲಕ ಮೆರವಣಿಗೆ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

## ಫಾಸ್ಟ್ ನ್ಯೂಸ್

### ಕುಂಬಾರ ಬೀದಿಯಲ್ಲಿ ಶ್ರೀರಾಮನಿಗೆ ಪೂಜೆ



» ನಮ್ಮ ಜನ ಸಮಾಚಾರ

ಚಿತ್ರದುರ್ಗ ; ಮರ್ಯಾದಾ ಪುರುಷ ಶ್ರೀರಾಮನ ಪ್ರಾಣ ಪ್ರತಿಷ್ಠಾಪನೆ ಅಯೋಧ್ಯೆಯಲ್ಲಿ ಉದ್ಘಾಟನೆಯಾಗಿದ್ದರಿಂದ ಹೊಳಲ್ಕೆರೆ ರಸ್ತೆ ಕುಂಬಾರ ಬೀದಿಯಲ್ಲಿ ವರಸಿದ್ದಿ ವಿನಾಯಕ ಸೇವಾ ಸಮಿತಿಯಿಂದ ಶ್ರೀರಾಮನ ಫೋಟೋಗೆ ಶ್ರದ್ದಾಭಕ್ತಿಯಿಂದಪೂಜೆಸಲ್ಲಿಸಿಸಂಭ್ರಮಿಸಲಾಯಿತು. ರಾಮ, ಲಕ್ಷ್ಮಣನ ವೇಷ ಧರಿಸಿದ್ದ ಇಬ್ಬರು ಬಾಲಕರು ಎಲ್ಲರ ಗಮನ ಸೆಳೆದರು.ನಗರಸಭೆ ಸದಸ್ಯ ಶಶಿಧರ್, ತಿಮ್ಮಣ್ಣ, ಪೈಲೆಟ್ ಆನಂದ್, ಮಣಿ, ಬಾಬಣ್ಣ, ಯರ್ರಿಸ್ವಾಮಿ, ಕಾಂತರಾಜ್, ಮಹಾಂತಣ್ಣ, ಕೃಷ್ಣಮೂರ್ತಿ, ಬಾಗೋಡಿ, ಪೂರ್ಣಿಮ, ಕಿಶೋರ್ ಸೇರಿದಂತೆ ಕುಂಬಾರ ಬೀದಿ ನಿವಾಸಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.ಪೂಜೆಯ ನಂತರ ಭಕ್ತರಿಗೆ ಪ್ರಸಾದ ವಿನಿಯೋಗಿಸಲಾಯಿತು.

### ರಾಮ ಮಂದಿರ ಉದ್ಘಾಟನೆಯ ಹಿನ್ನೆಲೆಯಲ್ಲಿ ವಿವಿಧ ವೇಷಗಳಲ್ಲಿ ಕಂಗೊಳಿಸಿದ ಮಕ್ಕಳು



» ನಮ್ಮ ಜನ ಸಮಾಚಾರ

ಹಿರಿಯೂರು: ಹಿರಿಯೂರಿನ ರಾಜ್ ಮೋಹನ್ ಟೆಕ್ಸ್ ಟೈಲ್ಸ್ ಮಾಲೀಕರಾದ ದುರ್ಗಾ ಚಂದ್ ಜೈನ್, ದೀಪ್ತಿ ಜೈನ್ ಇವರ ನೇತೃತ್ವದಲ್ಲಿ ಅಯೋಧ್ಯೆಯ ಶ್ರೀರಾಮ ಮಂದಿರದ ಉದ್ಘಾಟನೆ ಸಮಾರಂಭದ ಅಂಗವಾಗಿ ಪುಟಾಣಿ ಆಯುಶ್ ಜೈನ್ ಶ್ರೀ ರಾಮನ ವೇಷ, ಧ್ರುವ ಜೈನ್ ಲಕ್ಷ್ಮಣ ನ ವೇಷ, ಕೀರ್ತಿ ಜೈನ್ ಸೀತೆಯ ವೇಷ, ರಿದ್ದಂ ಜೈನ್ ರಾಜ ದಶರಥನ ವೇಷ, ರುಥ್ವಿ ಜೈನ್ ರಾಣಿ ಕೌಸಲ್ಯೆಯವೇಷ ಧರಿಸಿ ಎಲ್ಲರನ್ನು ಆಕರ್ಷಿಸಿದರು ಈ ಸಂದರ್ಭದಲ್ಲಿ ರಾಜಮೋಹನ್ ಟೆಕ್ಸ್ ಟೈಲ್ಸ್ ನ ಕಿರಣ್ ಜೈನ್ ಪಾಯಲ್ ಸಾರೀಸ್ ನ ಜಬಾರ್ ಸಿಂಗ್, ಪವಿತ್ರ ಫ್ಯಾಶನ್ ನ ಗೋವಿಂದ್ ಸಿಂಗ್ ಮಕ್ಕಳಿಗೆ ಪ್ರೋತ್ಸಾಹಿಸಿದರು

### ಭದ್ರಾಮೇಲ್ದಂಡೆಯೋಜನೆ ಶೀಘ್ರ ಅನುಷ್ಠಾನಕ್ಕೆ ತರಲು ಜಿಲ್ಲಾನೀರಾವರಿ ಅನುಷ್ಠಾನ ಹೋರಾಟಸಮಿತಿ ಒತ್ತಾಯ

» ಹಿರಿಯೂರು


ಭದ್ರಾ ಮೇಲ್ದಂಡೆ ಯೋಜನೆ ಶೀಘ್ರ ಅನುಷ್ಠಾನಕ್ಕೆ ತರಬೇಕೆಂದು ಒತ್ತಾಯಿಸಿ, ಚಿತ್ರದುರ್ಗ ಜಿಲ್ಲಾ ನೀರಾವರಿ ಅನುಷ್ಠಾನ ಹೋರಾಟ ಸಮಿತಿ ವತಿಯಿಂದ ಜನವರಿ 23ರ ಮಂಗಳವಾರದಂದು ಬೆಳಿಗ್ಗೆ 6.00 ರಿಂದ ಸಾಯಂಕಾಲ 6:00 ಗಂಟೆಯ ವರೆಗೆ ಚಿತ್ರದುರ್ಗ ನಗರದ ಬಂದ್ ಗೆ ಕರೆ ನೀಡಲಾಗಿದೆ ಎಂಬುದಾಗಿ ರೈತಸಂಘದ ಜಿಲ್ಲಾ ಕಾರ್ಯಾಧ್ಯಕ್ಷರಾದ ಕೆ.ಸಿ.ಹೊರಕೇರಪ್ಪ ತಿಳಿಸಿದ್ದಾರೆ. ಚಿತ್ರದುರ್ಗ ಬಂದ್ ಕರೆಗೆ ಕರ್ನಾಟಕ ರಾಜ್ಯ ರೈತ ಸಂಘ ಚಿತ್ರದುರ್ಗ ಜಿಲ್ಲಾ ಘಟಕ ಸಂಪೂರ್ಣ ಬೆಂಬಲ ವ್ಯಕ್ತಪಡಿಸಿದ್ದು, ನಾಳಿನ ಚಿತ್ರದುರ್ಗ ಬಂದ್ ಕಾರ್ಯಕ್ರಮಕ್ಕೆ ರೈತ ಸಂಘದ ಮುಖಂಡರು, ಜಿಲ್ಲೆಯ ಜನಪರ ಹೋರಾಟಗಾರರು, ಚಿಂತಕರು ಆಗಮಿಸುವ ಮೂಲಕ ಈ ಚಿತ್ರದುರ್ಗ ಬಂದ್ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂಬುದಾಗಿ ರಾಜ್ಯ ರೈತ ಸಂಘ ಜಿಲ್ಲಾ ಕಾರ್ಯಾಧ್ಯಕ್ಷರಾದ ಕೆ.ಸಿ.ಹೊರೆಕೇರಪ್ಪ ಮನವಿ ಮಾಡಿದ್ದಾರೆ.

### ಸಾಮೂಹಿಕ ಪೂಜೆ

» ಹಿರಿಯೂರು

ಕಳೆದ 500 ವರ್ಷಗಳ ಭಾರತದ ಕನಸು ನನಸಾಗುತ್ತಿರುವ ಅಯೋಧ್ಯೆಯ ಶ್ರೀರಾಮಲಲ್ಲಾ ವಿಗ್ರಹ ಪ್ರತಿಷ್ಠಾಪನೆ ಕಾರ್ಯಕ್ರಮವನ್ನು ಇಲ್ಲಿಂದಲೇ ವೀಕ್ಷಣೆ ಮಾಡುವ ಮೂಲಕ ಶ್ರೀರಾಮನ ಕೃಪಾಶೀರ್ವಾದ ಪಡೆಯಬೇಕೆಂಬ ಉದ್ದೇಶದಿಂದ ಎಲ್.ಇ.ಡಿ ಟಿವಿ ಮಾಧ್ಯಮಗಳ ವ್ಯವಸ್ಥೆ ಕಲ್ಪಿಸಲಾಗಿತ್ತು. ರಾಮಲಲ್ಲಾ ವಿಗ್ರಹ ಪ್ರತಿಷ್ಠಾಪನೆ ಹಿನ್ನೆಲೆಯಲ್ಲಿ ಆರ್ಯವೈಶ್ಯ ಮಂಡಳಿ, ಅಂಗ ಸಂಸ್ಥೆಗಳ ವತಿಯಿಂದ ಶ್ರೀರಾಮಸೀತಾಲಕ್ಷ್ಮಣ, ಆ ಂಜನೇಯ ಮೂಲ ವಿಗ್ರಹಗಳಿಗೆ ಪೂಜಾ ಕಾರ್ಯಕ್ರಮ ನಡೆಸಲಾಯಿತು.

# ಶ್ರೀ ಅಹೋಬಲ ಟಿವಿಎಸ್ 2 ವರ್ಷದ ಸಂಭ್ರಮ








» ನಮ್ಮ ಜನ ಸಮಾಚಾರ

ಚಿತ್ರದುರ್ಗ: ಚಿತ್ರದುರ್ಗ ನಗರದ ಶ್ರೀ ಅಹೋಬಲ ಟಿವಿಎಸ್ ಗೆ ಎರಡನೇ ವರ್ಷದ ವಾರ್ಷಿಕೋತ್ಸವ ಸಮಾರಂಭವನ್ನು ಚಳ್ಳಕೆರೆ ಕ್ಷೇತ್ರದ ಶಾಸಕರಾದ ಟಿ.ರಘುಮೂರ್ತಿ ಅವರಿಂದ ಕೇಕ್ ಕಟ್ ಮಾಡಿಸುವ ಮೂಲಕ ಸಂಭ್ರಮ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕರು ಜಿಲ್ಲಾ ಕೇಂದ್ರ ಚಿತ್ರದುರ್ಗದಲ್ಲಿ ಕಳೆದ ಎರಡು ವರ್ಷಗಳ ಹಿಂದೆ ಜನವರಿ 21 ರಂದು ಆರಂಭವಾದ ಶ್ರೀ ಅಹೋಬಲ ಟಿವಿಎಸ್ ಸಾಕಷ್ಟು ಯಶಸ್ಸು ಸಾಧಿಸಿ ಮತ್ತು ಅನೇಕ ಪ್ರಶಸ್ತಿಗಳನ್ನು ಮುಡಿಗೇರಿಸಿಕೊಂಡು ಯಶಸ್ವಿಯಾಗಿ ಸಂಪೂರ್ಣ ಎರಡು ವರ್ಷ ಪೂರೈಸಿರುವುದು ತುಂಬಾ ಸಂತೋಷವಾಗಿದೆ ಎಂದರು.

ಒಂದು ಉದ್ಯಮ ಆರಂಭಿಸುವುದು ಸುಲಭವಲ್ಲ, ಆದರೆ ಉದ್ಯಮ ಆರಂಭಿಸಿದ ಮೇಲೆ ಸಾಕಷ್ಟು ಏಳುಬೀಳುಗಳನ್ನು ಅನುಭವಿಸಿ ಯಶಸ್ವಿ ಸಾಧಿಸುವುದು ದೊಡ್ಡ ಸವಾಲಿನ ಕೆಲಸ ಅಂತಹ ಎಲ್ಲಾ ಬೆಳವಣಿಗೆಗಳು ಮತ್ತು ಪೈಪೋಟಿ ಎದುರಿಸುವ ಮೂಲಕ ನಮ್ಮ ಹುಡುಗ ಟಿವಿಎಸ್ ಮಾಲೀಕ ಅರಣ್ ಕುಮಾರ್ ಯಶಸ್ಸು ಸಾಧಿಸಿದ್ದು ಯುವ ಸಮೂಹಕ್ಕೆ ಪ್ರೇರಣೆಯಾಗಿದ್ದಾರೆ.




ಗ್ರಾಮೀಣ ಭಾಗದಿಂದ ಬಂದ ನನ್ನ ಕ್ಷೇತ್ರದ ಯುವಕ ಒಂದು ಉದ್ಯಮ ಆರಂಭಿಸಿ ಸಾವಿರಾರು ಗ್ರಾಹಕರ ಮನಗೆದ್ದು ಜನರ ವಿಶ್ವಾಸ ಪಡೆದಿದ್ದಾರೆ. ಇಂತಹ ನೂರಾರು ಸಂಭ್ರಮಗಳನ್ನು ಶ್ರೀ ಅಹೋಬಲ ಟಿವಿಎಸ್ ಪೂರೈಸಲಿ ಎಂದು ಶುಭ ಹಾರೈಸಿದರು. ಮಾಜಿ ಶಾಸಕ ಜಿ.ಹೆಚ್.ತಿಪ್ಪಾರೆಡ್ಡಿ ಮಾತನಾಡಿ ಶ್ರೀ ಅಹೋಬಲ ಟಿವಿಎಸ್ ಚಿತ್ರದುರ್ಗ ಜಿಲ್ಲೆಯ ದ್ವಿಚಕ್ರ ವಾಹನ ಗ್ರಾಹಕರಿಗೆ ಉತ್ತಮ ಸೇವೆ ನೀಡುತ್ತಿದೆ. ಎರಡು ವರ್ಷ ಪೂರೈಸಿರುವ ಟಿವಿಎಸ್ ಶೋ ರೂಂಗೆ ಮತ್ತಷ್ಟು ಜನಪ್ರಿಯತೆ ಮತ್ತು ಹೆಚ್ಚಿನ ಗ್ರಾಹಕರು ವಾಹನಗಳು ಖರೀದಿಸಲಿ ಎಂದು ಶುಭ ಹಾರೈಸಿದರು.

ಕರ್ನಾಟಕ ಸರ್ಕಾರದ ಅಬಕಾರಿ ಸಚಿವರಾದ ಆರ್.ಬಿ.ತಿಮ್ಮಾಪುರ, ಚಿತ್ರದುರ್ಗ ಲೋಕಸಭೆ ಕ್ಷೇತ್ರದ ಆಕಾಂಕ್ಷಿ ವಿನಯ ತಿಮ್ಮಾಪುರ, ಮಾಜಿ ನಗರಸಭೆ ಅಧ್ಯಕ್ಷ ಬಿ.ಕಾಂತರಾಜ್, ಮುಖಂಡರಾದ ರಘು, ತಕ್ಕಡಿ ಸುರೇಶ್, ಉಪಾಧ್ಯ ಹೋಟೆಲ್ ದೀಪನಾಂದ್ ಸೇರಿ ಹಲವು ಗಣ್ಯರು ಆಗಮಿಸಿ ಶುಭ ಕೋರಿದರು.

ಈ ಸಂದರ್ಭದಲ್ಲಿ ಶ್ರೀ ಅಹೋಬಲ ಟಿವಿಎಸ್ ಮಾಲೀಕ ಪಿ.ವಿ.ಅರುಣ್ ಕುಮಾರ್, ಶ್ರೀ ಅಹೋಬಲ ಸ್ಟೀಲ್ ಅಂಡ್ ಸಿಮೆಂಟ್ ಉದ್ಯಮದ ಮಂಜುಳ, ಸರ್ವಿಸ್ ಮ್ಯಾನೇಜರ್ ಯಾಸಿರ್, ವಿದ್ಯಾದರ್, ಸೇಲ್ಸ್ ಮ್ಯಾನೇಜರ್ ರವಿ ಮತ್ತು ಸಿಬ್ಬಂದಿಗಳು ಹಾಜರಿದ್ದರು.

# ಫೆ.1ರಂದು ಮಡಿವಾಳ ಮಾಚಿದೇವ ಜಯಂತಿ



» ಚಿತ್ರದುರ್ಗ

ಜಿಲ್ಲಾ ಕೇಂದ್ರದಲ್ಲಿ 2024ರ ಫೆ.1ರಂದು ಬೆಳಿಗ್ಗೆ 11ಕ್ಕೆ ಮಡಿವಾಳ ಮಾಚಿದೇವ ಜಯಂತಿ ಕಾರ್ಯಕ್ರಮವನ್ನು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸರಳ ಹಾಗೂ ಅರ್ಥಪೂರ್ಣವಾಗಿ ಜಯಂತಿ ಕಾರ್ಯಕ್ರಮ ಆಯೋಜಿಸಲು ತೀರ್ಮಾನಿಸಲಾಯಿತು.

ನಗರದ ಉಪವಿಭಾಗಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಮಡಿವಾಳ ಮಾಚಿದೇವ ಜಯಂತಿ ಆಚರಿಸುವ ಸಂಬಂಧ ಅಗತ್ಯ ಪೂರ್ವ ಸಿದ್ಧತೆ ಕೈಗೊಳ್ಳುವ ಕುರಿತು ಪೂರ್ವಭಾವಿ ಸಭೆಯಲ್ಲಿ ಚರ್ಚಿಸಲಾಯಿತು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ ಮಾತನಾಡಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಹಾಗೂ ಮಡಿವಾಳ ಸಮಾಜದ ಸಂಯುಕ್ತಾಶ್ರಯದಲ್ಲಿ ಮಡಿವಾಳ ಮಾಚಿದೇವ ಜಯಂತಿಯನ್ನು ಸರಳ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಗುವುದು. ಸರ್ಕಾರದ ಶಿಷ್ಟಾಚಾರದ ಅನುಸಾರ ಆಹ್ವಾನ ಪತ್ರಿಕೆ ಮುದ್ರಿಸಿ, ಜನಪ್ರತಿನಿಧಿಗಳನ್ನು ಜಯಂತಿಗೆ ಆಹ್ವಾನಿಸಲಾಗುವುದು ಎಂದರು.

ಮಡಿವಾಳ ಮಾಚಿದೇವ ಅವರ ಕುರಿತು ಉಪನ್ಯಾಸ ನೀಡಲು ಸಂಪನ್ಮೂಲ ವ್ಯಕ್ತಿ ಹಾಗೂ ಸಹಾಯಕ ಪ್ರಾಧ್ಯಾಪಕ ಡಾ.ಎನ್.ಎಸ್. ಮಹಂತೇಶ್ ಅವರಿಂದ ಉಪನ್ಯಾಸ ಹಾಗೂ ಗಂಜಿಕಟ್ಟೆ ಕೃಷ್ಣಮೂರ್ತಿ ಹಾಗೂ ಸಂಗಡಿಗರಿಂದ ಗೀತಗಾಯನ ಕಾರ್ಯಕ್ರಮಕ್ಕೆ ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗುವುದು ಎಂದರು.

ಜಿಲ್ಲಾ ಮಡಿವಾಳ ಸಮಾಜದ ಅಧ್ಯಕ್ಷ ರಾಮಪ್ಪ ಮಾತನಾಡಿ, ಜಿಲ್ಲೆಯಲ್ಲಿ ಬರಗಾಲ ಹಾಗೂ ಕೋವಿಡ್ ಹಿನ್ನಲೆಯಲ್ಲಿ ಈ ಬಾರಿಯ ಮಡಿವಾಳ ಮಾಚಿದೇವ ಜಯಂತಿ ಕಾರ್ಯಕ್ರಮವನ್ನು ಸರಳ ಹಾಗೂ ಅರ್ಥಪೂರ್ಣವಾಗಿ ಜಯಂತಿ ಕಾರ್ಯಕ್ರಮ ಆಯೋಜಿಸುವುದು ಸೂಕ್ತ ಎಂದು ಅಭಿಪ್ರಾಯವ್ಯಕ್ತಪಡಿಸಿದರು. ಇದಕ್ಕೆ ಸಮಾಜದ ಮುಖಂಡರು ಒಪ್ಪಿಗೆ ಸೂಚಿಸಿದರು.

ಸಭೆಯಲ್ಲಿ ಮಡಿವಾಳ ಸಮಾಜದ ಕಾರ್ಯದರ್ಶಿ ಮಂಜುನಾಥ್, ರಾಜ್ಯ ಘಟಕದ ಗೌರವಾಧ್ಯಕ್ಷೆ ರಂಗಮ್ಮ, ಸಮಾಜದ ಮುಖಂಡರಾದ ಪ್ರಕಾಶ್, ಗೋಪಾಲಣ್ಣ, ತಿಪ್ಪೇಸ್ವಾಮಿ, ರಮೇಶ್, ಲಕ್ಷ್ಮಣಪ್ಪ, ರಂಗಸ್ವಾಮಿ, ರುದ್ರೇಶ್, ಮಂಜುನಾಥ್, ಶಾಲಾ ಶಿಕ್ಷಣ ಇಲಾಖೆಯ ಚಿದಾನಂದಸ್ವಾಮಿ, ನಗರಸಭೆಯ ಪುಟ್ಟಪ್ಪ ಸೇರಿದಂತೆ ಜಿಲ್ಲಾ ಕಸಾಪ ಕಾರ್ಯದರ್ಶಿ ಕೆಪಿಎಂ ಗಣೇಶಯ್ಯ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

# ತೇರುಮಲ್ಲೇಶ್ವರ ದೇವಸ್ಥಾನದಲ್ಲಿ ಹೋಮ ಕುಂಡ ಸ್ಥಾಪನೆ



» ಹಿರಿಯೂರು

ಅಯೋಧ್ಯೆಯಲ್ಲಿ ಶ್ರೀರಾಮವಿಗ್ರಹ ಪ್ರತಿಷ್ಠಾಪನಾ ಕಾರ್ಯಕ್ರಮದ ಅಂಗವಾಗಿ ಶ್ರೀಪತಂಜಲಿ ಯೋಗಶಿಕ್ಷಣ ಸಮಿತಿ ಕರ್ನಾಟಕ ಸಮಿತಿಯ ವತಿಯಿಂದ ದಕ್ಷಿಣಕಾಶಿ ಎಂದು ಪ್ರಸಿದ್ಧವಾಗಿರುವ ಶ್ರೀತೇರುಮಲ್ಲೇಶ್ವರ ದೇವಸ್ಥಾನದಲ್ಲಿ ನೂರೆಂಟು ಹೋಮಕುಂಡಗಳನ್ನು ಸ್ಥಾಪನೆ ಮಾಡಿ ಅಗ್ನಿಹೋತ್ರ ಕಾರ್ಯಕ್ರಮವನ್ನು ನೆರವೇರಿಸಲಾಯಿತು.ಇದೇ ಸಂದರ್ಭದಲ್ಲಿ ಹನುಮಾನ್ ಹಾಗೂ ವಿಷ್ಣುಯೋಗ ನಮಸ್ಕಾರಗಳನ್ನು ಮಾಡಲಾಯಿತು. ನಂತರ ಪ್ರಸಾದ ವಿನಿಯೋಗ ನೆರವೇರಿಸಲಾಯಿತು. ಈ ಕಾರ್ಯಕ್ರಮದಲ್ಲಿ ವೇದಾವತಿ ವಲಯ ಸಂಚಾಲಕರಾದ ಕುಮಾರಣ್ಣ ಹಾಗೂ ತಾಲ್ಲೂಕು ಸಂಚಾಲಕರಾದ ಉಮೇಶ್ ಹಾಗೂ ಸಂಘಟನಾ ಪ್ರಮುಖರಾದ ಚಂದ್ರಕಾಂತ್ ಹಾಗೂ ಶ್ರೀಮತಿ ಗಂಗಕ್ಕ ಹಾಗೂ ಹಿರಿಯೂರು ತಾಲ್ಲೂಕಿನ ಪತಂಜಲಿ ಯೋಗ ಶಿಕ್ಷಣ ಸಮಿತಿಯ ಎಲ್ಲಾ ಯೋಗ ಬಂಧುಗಳು ಈ ಕಾರ್ಯಕ್ರಮವನ್ನು ಅತ್ಯಂತ ಅಚ್ಚುಕಟ್ಟಾಗಿ ಯಶಸ್ವಿಯಾಗಿ ನೆರವೇರಿಸಲಾಯಿತು .

## ಪ್ರಮುಖ ಸುದ್ದಿ

### ಸಂವಿಧಾನ ಮಹತ್ವ ಜನರಿಗೆ ತಿಳಿಸಲು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಕರೆ

# ಸಂವಿಧಾನ ಜಾಗೃತಿ ಜಾಥಾ: ಜಿಲ್ಲೆಯಾದ್ಯಂತ ಮೆರವಣಿಗೆ

» ಚಿತ್ರದುರ್ಗ

ಸಂವಿಧಾನದ ಮಹತ್ವ ಸಾರುವ ನಿಟ್ಟಿನಲ್ಲಿ ಇದೇ ಜನವರಿ 26ರಂದು ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಅವರು ಸಂವಿಧಾನ ಜಾಗೃತಿ ಜಾಥಾಕ್ಕೆ ಚಾಲನೆ ನೀಡುವರು. ಜಿಲ್ಲೆಯ ಪ್ರತಿ ಗ್ರಾಮ ಪಂಚಾಯಿತಿ ಹಾಗೂ ನಗರ, ಪಟ್ಟಣ ಪಂಚಾಯಿತಿ, ಪುರಸಭೆ ವ್ಯಾಪ್ತಿಯಲ್ಲಿ ಸ್ಥಬ್ದಚಿತ್ರ ಮೆರವಣಿಗೆ ನಡೆಯಲಿದೆ. ಎಲ್ಲಾ ಹಂತದ ಅಧಿಕಾರಿಗಳು ಕ್ರೀಯಾಶೀಲವಾಗಿ ಭಾಗಿಯಾಗಿ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಸಂವಿಧಾನದ ಮಹತ್ವವನ್ನು ಜನರಿಗೆ ತಿಳಿಸಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು.ಜಿ.ಆರ್.ಜೆ ಕರೆ ನೀಡಿದರು.

ಈ ಕುರಿತು ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸೋಮವಾರ ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು. ಸಮಾಜ ಕಲ್ಯಾಣ ಇಲಾಖೆ ಸಚಿವರಾದ ಹೆಚ್.ಸಿ.ಮಹಾದೇವಪ್ಪ, ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಚಿವರಾದ ಪ್ರಿಯಾಂಕ ಖರ್ಗೆಯವರು ಬಹಳಷ್ಟು ಆಸಕ್ತಿ ವಹಿಸಿ ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮ ರೂಪಿಸಿದ್ದಾರೆ. ಇದನ್ನು ರಾಜ್ಯದ ಪ್ರತಿ ಜಿಲ್ಲೆಯಲ್ಲಿಯೂ ಯಶಸ್ವಿಗೊಳಿಸಲು ಸೂಚನೆ ನೀಡಿದ್ದಾರೆ. ಅತ್ಯುತ್ತಮವಾಗಿ



ಸ್ಥಬ್ದಚಿತ್ರ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಜನಮನ ಗೆಲ್ಲುವ 3 ಜಿಲ್ಲೆಗಳ ಸ್ಥಬ್ದಚಿತ್ರಗಳಿಗೆ ರಾಜ್ಯ ಮಟ್ಟದಲ್ಲಿ ಪ್ರಶಸ್ತಿ ನೀಡಿ ಸನ್ಮಾನಿಸಲಾಗುವುದು. ಸಂವಿಧಾನ ಜಾಗೃತಿಜಾಥಾದಲ್ಲಿಹೆಚ್ಚುವಿದ್ಯಾರ್ಥಿಗಳನ್ನು ನೊಂದಣಿ ಮಾಡುವ ಮೂಲಕ ಜಿಲ್ಲೆಯಲ್ಲಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ದಿವ್ಯಪ್ರಭು ಜೆ.ಆರ್.ಜೆ ಸೂಚನೆ ನೀಡಿದರು. ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಮಾತನಾಡಿ, ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮ ಯಶಸ್ವಿಗೆ ಜಿಲ್ಲಾ ಮಟ್ಟದಲ್ಲಿ ಹಾಗೂ ತಾಲ್ಲೂಕು ಮಟ್ಟದಲ್ಲಿ ಸಮನ್ವಯ ಸಮಿತಿಗಳನ್ನು ರಚನೆ ಮಾಡಲಾಗಿದೆ. ತಾಲ್ಲೂಕು ಮಟ್ಟದಲ್ಲಿ ತಹಶೀಲ್ದಾರ್ ಅಧ್ಯಕ್ಷರಾಗಿದ್ದು, ತಾ.ಪಂ ಇಓ ಉಪಾಧ್ಯಕ್ಷರಾಗಿರುತ್ತಾರೆ. ತಹಶೀಲ್ದಾರ್‌ಗಳು ತಾಲ್ಲೂಕು ವ್ಯಾಪ್ತಿಗೆ ಒಳಪಡುವ ಸಚಿವರು, ಸಂಸದರು, ವಿಧಾನಸಭೆ ಹಾಗೂ ವಿಧಾನ ಪರಿಷತ್ ಸದಸ್ಯರು ಸೇರಿದಂತೆ ಶಿಷ್ಟಾಚಾರದ ಪ್ರಕಾರ ಎಲ್ಲಾ ಜನಪ್ರನಿಧಿಗಳನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಿ ಯಶಸ್ವಿಗೊಳಿಸಬೇಕು. ಗ್ರಾಮ ಮಟ್ಟದಲ್ಲಿ ಪಿ.ಡಿ.ಓಗಳು ಎಲ್ಲಾ ಗ್ರಾ.ಪಂ ಸದಸ್ಯರು, ನಗರ ಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯತಿ ವ್ಯಾಪ್ತಿಯಲ್ಲಿ ಆಯಾ ಅಧಿಕಾರಿಗಳು ಚುನಾಯಿತ ಸದಸ್ಯರನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಬೇಕು. ಪ್ರತಿ ಗ್ರಾಮ ಪಂಚಾಯಿತಿಗಳಿಗೆ ಒಬ್ಬ ನೋಡಲ್ ಅಧಿಕಾರಿಗಳನ್ನು ನೇಮಿಸಬೇಕು. ಕಾರ್ಯಕ್ರಮದ ಕುರಿತು ಸಾರ್ವಜನಿಕರಿಗೆ ಹೆಚ್ಚಿನ ಪ್ರಚಾರ ನೀಡಬೇಕು. ನುರಿತ ಭಾಷಣಕಾರರಿಂದ ಸಂವಿಧಾನ ಪೀಠಿಕೆ ಬಗ್ಗೆ ಭಾಷಣ ಮಾಡಿಸಬೇಕು. ಈಗಾಗಲೇ ಜಾಥಾ ಹಾಗೂ ಸ್ಥಬ್ದಚಿತ್ರ ತೆರಳುವ ಮಾರ್ಗನಕ್ಷೆಯನ್ನು ತಯಾರಿಸಲಾಗಿದೆ. ಸಂಜೆಯ ವೇಳೆ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಹೆಚ್ಚು ಜನರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ಮಾಡಬೇಕು. ಸ್ಥಬ್ದಚಿತ್ರ ತೆರಳುವ ಮಾರ್ಗಗಳಲ್ಲಿ ಸೂಕ್ತ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಕಲ್ಪಿಸಬೇಕು ಎಂದು ಅವರು ಅಧಿಕಾರಿಗಳಿಗೆ ಸೂಚಿಸಿದರು.

ಸಂವಿಧಾನ ಜಾಗೃತಿ ಜಾಥಾ ಹಾಗೂ ಸ್ಥಬ್ದಚಿತ್ರ ಮೆರವಣಿಗೆ ಇದೇ ಜ.26 ರಿಂದ ಪ್ರಾರಂಭವಾಗಿ ಫೆ.23 ವರೆಗೆ ನಡೆಯಲಿದೆ. ಜಾಥಾ ತೆರಳುವ ಮಾರ್ಗವನ್ನು ಸಹ ಈಗಾಗಲೇ ಸಿದ್ದಪಡಿಸಲಾಗಿದೆ. ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಸಮನ್ವಯ ಸಮಿತಿಗಳ ನಡುವೆ ಸಂಪರ್ಕ ಹಾಗೂ ಕಾರ್ಯಕ್ರಮದ ಯಶಸ್ವಿಗಾಗಿ ಪ್ರತಿ ತಾಲ್ಲೂಕುಗಳಿಗೆ ನೋಡಲ್ ಹಾಗೂ ಸಹಾಯಕ ನೋಡಲ್ ಅಧಿಕಾರಿಗಳನ್ನು ನೇಮಿಸಲಾಗಿದೆ. ಇದೇ ರೀತಿ ಸ್ಥಬ್ದಚಿತ್ರದ ವಾಹನ ಉಸ್ತುವಾರಿಗಾಗಿ ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ನೇಮಿಸಲಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಸಭೆಯಲ್ಲಿ ಮಾಹಿತಿ ನೀಡಿದರು.ಸಭೆಯಲ್ಲಿ ಪ್ರಭಾರ ಉಪವಿಭಾಗಾಧಿಕಾರಿ ವಿವೇಕ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಭಾರತಿ.ಬಣಕಾರ್, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಧಿಕಾರಿ ಓ.ಪರಮೇಶ್ವರಪ್ಪ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಧಿಕಾರಿ ಡಾ.ರೇಣುಪ್ರಸಾದ್, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಕಾಂತರಾಜ್ ಸೇರಿದಂತೆ ಎಲ್ಲಾ ತಾಲ್ಲೂಕುಗಳ ತಹಶೀಲ್ದಾರ್, ಸಭೆಯಲ್ಲಿ ಇದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T